For more job news visit : www.kpscvaani.com

ಬೆಂಗಳೂರು ನಗರ ಜಿಲ್ಲಾ ಪಂಚಾಯಿತಿ ವ್ಯಾಪ್ತಿಯಲ್ಲಿ ಬರುವ ಗ್ರಾಮ ಪಂಚಾಯಿತಿ ಗ್ರಂಥಾಲಯ ಮತ್ತು ಮಾಹಿತಿ ಕೇಂದ್ರದ ಮೇಲ್ವಿಚಾರಕರ ಹುದ್ದೆಗೆ ನೇಮಕಾತಿ ಅರ್ಜಿ ನಮೂನೆ

ಗ್ರಾಮ ಪಂಚಾಯಿತಿ ಹೆಸರು:

ತಾಲ್ಲೂಕು:

ಜಿಲ್ಲೆ:

ಇತ್ತೀಚಿನ ಭಾವಚಿತ್ರದ ಪಾಸ್ ಪೋರ್ಟ್ ಅಳತೆ ಲಗತ್ತಿಸುವುದು

ಬೆಂಗಳೂರು ನಗರ ಜಿಲ್ಲಾ ಪಂಚಾಯಿತಿ ವ್ಯಾಪ್ತಿಯ ಗ್ರಾಮ ಪಂಚಾಯಿತಿ ಗ್ರಂಥಾಲಯ ಮತ್ತು ಮಾಹಿತಿ ಕೇಂದ್ರದ ಮೇಲ್ವಿಚಾರಕರ ಹುದ್ದೆಗೆ ನೇಮಕಾತಿ ಈ ಕೆಳಕಂಡ ಮಾಹಿತಿ ಹಾಗೂ ಅಗತ್ಯ ದಾಖಲಾತಿಯೊಂದಿಗೆ ನನ್ನ ಅರ್ಜಿಯನ್ನು ಸಲ್ಲಿಸುತ್ತಿದ್ದೇನೆ.

ಅಭ್ಯರ್ಥಿಯ ಹೆಸರು(ಎಸ್.ಎಸ್.ಎಲ್.ಸಿ ಅಂಕ ಪಟ್ಟಿಯಲ್ಲಿರುವಂತೆ)	
ತಂದೆಯ/ಗಂಡನ ಹೆಸರು	
ಜನ್ಮ ದಿನಾಂಕ (ಎಸ್ ಎಸ್ ಎಲ್ ಸಿ ಅಂಕ ಪಟ್ಟಿಯಲ್ಲಿರುವಂತೆ) ಪ್ರಮಾಣ ಪತ್ರವನ್ನು ಲಗತ್ತಿಸುವುದು	
ಲಿಂಗ	
ಜಾತಿ/ವರ್ಗ ನಮುದಿಸುವುದು(ಪ್ರಮಾಣ ಪತ್ರವನ್ನು ಲಗತ್ತಿಸುವುದು)	
ವಿವಾಹಿತ/ಅವಿವಾಹಿತ/ವಿಧವೆ	
ಅರ್ಜಿ ಸಲ್ಲಿಸಿದ ಹುದ್ದೆಯ ಹೆಸರು ಅರ್ಜಿ ಸಲ್ಲಿಸಿದ ಗ್ರಾಮ ಪಂಚಾಯಿತಿ ಹೆಸರು ಹಾಗೂ ತಾಲ್ಲೂಕು	
ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ವಾಸಿಸುವ ಬಗ್ಗೆ ತಹಶೀಲ್ದಾರರವರಿಂದ ಪಡೆದ ವಾಸಸ್ಥಳ ಪ್ರಮಾಣ ಪತ್ರ (ಆಧಾರ್ ಕಾರ್ಡ್/ವೋಟರ್ ಐಡಿ)	
ಅಭ್ಯರ್ಥಿಯ ಖಾಯಂ ವಿಳಾಸ	
ದೂರವಾಣಿ/ಮೊಬೈಲ್ ಸಂಖ್ಯೆ	
ಆಧಾರ್ ಕಾರ್ಡ್ ಸಂಖ್ಯೆ	

...2

For more job news visit : www.kpscvaani.com

<table>
<tr><td>ಸರ್ಟಿಫಿಕೇಷನ್ ಕೋರ್ಸ್ ಇನ್ ಲೈಬ್ರರಿ ಸೈನ್ಸ್‌ನಲ್ಲಿ ಉತ್ತೀರ್ಣರಾಗಿರುವ ಪ್ರಮಾಣ ಪತ್ರ</td><td></td></tr>
<tr><td>ದ್ವಿತೀಯ ಪದವಿ ಪೂರ್ವ ಪರೀಕ್ಷೆ(ಪಿ.ಯು.ಸಿ) (ಪ್ರಮಾಣ ಪತ್ರವನ್ನು ಲಗತ್ತಿಸುವುದು)</td><td><table><tr><td>ಪಿ.ಯು.ಸಿ ಗೆ ನಿಗದಿಪಡಿಸಿದ ಒಟ್ಟು ಅಂಕ</td><td>ಪಿ.ಯು.ಸಿ ಯಲ್ಲಿ ಗಳಿಸಿದ ಅಂಕ</td><td>ಶೇಕಡ%</td></tr><tr><td></td><td></td><td></td></tr></table></td></tr>
<tr><td>ಅಂಗವಿಕ ಅಭ್ಯರ್ಥಿಯು (ಹೌದು/ಇಲ್ಲ) ಜಿಲ್ಲಾ ಸರ್ಜನ್ ರವರಿಂದ ಪಡೆದ ಪ್ರಮಾಣ ಪತ್ರವನ್ನು ಲಗತ್ತಿಸುವುದು.</td><td></td></tr>
<tr><td>ಕನ್ನಡ ಮಾಧ್ಯಮದ ಅಭ್ಯರ್ಥಿಯು (ಹೌದು/ಇಲ್ಲ) (1 ರಿಂದ 10ನೇ ತರಗತಿ ವ್ಯಾಸಂಗ ಪ್ರಮಾಣ ಪತ್ರವನ್ನು ಮುಖ್ಯೋಪಾಧ್ಯಾಯರು ಹಾಗೂ ಕ್ಷೇತ್ರ ಶಿಕ್ಷಣಾಧಿಕಾರಿಗಳಿಂದ ಮೇಲುರುಜು ಮಾಡಿದ ಪ್ರಮಾಣ ಪತ್ರವನ್ನು ಲಗತ್ತಿಸುವುದು)</td><td></td></tr>
<tr><td>ಗಣಕಯಂತ್ರ ಪ್ರಮಾಣ ಪತ್ರ (ಕನಿಷ್ಠ ಮೂರು ತಿಂಗಳು)</td><td></td></tr>
<tr><td>ಯೋಜನಾ ನಿರಾಶ್ರಿತರು (ಹೌದು/ಇಲ್ಲ) (ಸರ್ಕಾರ ಆದೇಶ ಸಂಖ್ಯೆ:ಸಿಆಸುಇ 23 ಸೇನೆನಿ 99 ದಿನಾಂಕ:23/11/2000 ರನ್ವಯ ಯೋಜನೆಗಳಿಂದ ನಿರಾಶ್ರಿತರಾದ ಕುಟುಂಬದ ಅಭ್ಯರ್ಥಿಗಳಿಗೆ ಮೀಸಲಿರಿಸಿದ ಹುದ್ದೆಗಳಿಗೆ ಅರ್ಜಿ ಸಲ್ಲಿಸುವಂತಹ ಅಭ್ಯರ್ಥಿಗಳು ಸಂಬಂಧಿಸಿದ ತಹಶೀಲ್ದಾರವರಿಂದ ನಿಗದಿತ ನಮೂನೆಯಲ್ಲಿ ಪ್ರಮಾಣ ಪತ್ರವನ್ನು ಸಲ್ಲಿಸುವುದು)</td><td></td></tr>
<tr><td>ಮಾಜಿ ಸೈನಿಕರು (ಹೌದು/ಇಲ್ಲ) ಪ್ರಮಾಣ ಪತ್ರವನ್ನು ಲಗತ್ತಿಸುವುದು.</td><td></td></tr>
<tr><td>ತೃತೀಯ ಲಿಂಗ (ಹೌದು/ಇಲ್ಲ) (ಜಿಲ್ಲಾ ಮ್ಯಾಜಿಸ್ಟ್ರೇಟ್ ರವರಿಂದ ಪ್ರಮಾಣ ಪತ್ರವನ್ನು ನಿಗದಿಪಡಿಸಿದ ಕೊನೆಯ ದಿನಾಂಕದಂದು ಚಾಲ್ತಿಯಲ್ಲಿರುವಂತೆ ಲಗತ್ತಿಸುವುದು.</td><td></td></tr>
</table>

ಈ ಮೇಲ್ಕಂಡ ಮಾಹಿತಿಗಳಿಗೆ ಪೂರಕ ದಾಖಲೆಗಳೊಂದಿಗೆ ಅರ್ಜಿ ಸಲ್ಲಿಸುತ್ತಿದ್ದು. (ಪ್ರತಿಗಳನ್ನು ಸ್ವಯಂ ಹಾಗೂ ಪತ್ರಾಂಕಿತ ಅಧಿಕಾಗಳಿಂದ ದೃಢೀಕರಿಸಿ ಅರ್ಜಿಯೊಂದಿಗೆ ಲಗತ್ತಿಸಲಾಗಿದೆ) ಮೇಲಿನ ಎಲ್ಲಾ ಸ್ವವಿವರ ಮಾಹಿತಿ ಸರಿಯಾಗಿರುತ್ತದೆ ಎಂದು ಪ್ರಮಾಣೀಕರಿಸುತ್ತೇನೆ.

ದಿನಾಂಕ:

ಸ್ಥಳ:

ಅಭ್ಯರ್ಥಿಯ ಸಹಿ ಮತ್ತು ಹೆಸರು

For more job news visit : www.kpscvaani.com

ಕರ್ನಾಟಕ ಸರ್ಕಾರ

ಬೆಂಗಳೂರು ನಗರ ಜಿಲ್ಲಾ ಪಂಚಾಯಿತಿ

ಸಂಖ್ಯೆ:ಆಡಳಿತ(5) ಗ್ರಾಪಂಗಂ/ಮೇ.ನೇ/144/2023-24

ಎಸ್.ಕರಿಯಪ್ಪ ರಸ್ತೆ, ಬನಶಂಕರಿ
ಬೆಂಗಳೂರು, ದಿನಾಂಕ:23.07.2024

ಅಧಿಸೂಚನೆ

ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ (ಗ್ರಾಮ ಪಂಚಾಯತಿ ಗ್ರಂಥಾಲಯ ಮತ್ತು ಮಾಹಿತಿ ಕೇಂದ್ರಗಳ ಮೇಲ್ವಿಚಾರಕರ ಸೇವಾ) ನಿಯಮಗಳು, 2022ರಂತೆ ಜಾರಿಯಲ್ಲಿರುವ ನಿಯಮಗಳಡಿಯಲ್ಲಿ ಗ್ರಾಮ ಪಂಚಾಯತಿ ಗ್ರಂಥಾಲಯ ಮತ್ತು ಮಾಹಿತಿ ಕೇಂದ್ರಗಳ ಮೇಲ್ವಿಚಾರಕರ ಖಾಲಿ ಹುದ್ದೆಗಳಿಗೆ ನೇಮಕಾತಿ ಪ್ರಕ್ರಿಯೆಯನ್ನು ಕೈಗೊಳ್ಳಲಾಗಿದೆ.

ಬೆಂಗಳೂರು ನಗರ ಜಿಲ್ಲಾ ಪಂಚಾಯಿತಿ ವ್ಯಾಪ್ತಿಯಲ್ಲಿ 04 ಗ್ರಾಮ ಪಂಚಾಯಿತಿ ಗ್ರಂಥಾಲಯ ಮತ್ತು ಮಾಹಿತಿ ಕೇಂದ್ರಗಳ ಮೇಲ್ವಿಚಾರಕರ ಹುದ್ದೆ ಖಾಲಿ ಇದ್ದು, ಸದರಿ ದಿನಾಂಕ:06.10.2023ರ ಪತ್ರಿಕೆಯ ಪ್ರಕಟಣೆ ಅನ್ವಯ ದಿನಾಂಕ:02.03.2024 ರಂದು ನಡೆದ ಗ್ರಾಮ ಪಂಚಾಯಿತಿ ಗ್ರಂಥಾಲಯ ಮೇಲ್ವಿಚಾರಕರ ನೇಮಕಾತಿ ಪ್ರಕಿಯೆಯಲ್ಲಿ ಉಳಿದ ಗ್ರಾಮ ಪಂಚಾಯಿತಿ ಗ್ರಂಥಾಲಯಗಳಿಗೆ ಪ್ರಸ್ತುತ ಖಾಲಿ ಇರುವ ಪ್ರತಿ ಗ್ರಾಮ ಪಂಚಾಯಿತಿಗೆ ಒಂದರಂತೆ ಒಟ್ಟು 04 ಗ್ರಾಮ ಪಂಚಾಯಿತಿ ಗ್ರಂಥಾಲಯ ಮತ್ತು ಮಾಹಿತಿ ಕೇಂದ್ರಗಳ ಮೇಲ್ವಿಚಾರಕರ ಖಾಲಿ ಹುದ್ದೆಗಳಿಗೆ(ಮರು ಪ್ರಕಟಣೆ) ಅರ್ಹ ಅಭ್ಯರ್ಥಿಗಳಿಂದ ಅರ್ಜಿಯನ್ನು ಆಹ್ವಾನಿಸಲಾಗಿದೆ. ಆಸಕ್ತ ಅಭ್ಯರ್ಥಿಗಳು ಹೆಚ್ಚಿನ ಮಾಹಿತಿಗಾಗಿ ಬೆಂಗಳೂರು ನಗರ ಜಿಲ್ಲಾ ಪಂಚಾಯಿತಿ ವೆಬ್ URLhttps://zpbengaluruurban.karnataka.gov.in/enರಲ್ಲಿ ಪಡೆಯಬಹುದಾಗಿರುತ್ತದೆ. ಅಭ್ಯರ್ಥಿಗಳು ಸಂಬಂಧಿಸಿದ ಗ್ರಾಮ ಪಂಚಾಯಿತಿ ಕಾರ್ಯಾಲಯಗಳಿಂದ ಅರ್ಜಿಯನ್ನು ಪಡೆದು ಯಾವುದೇ ಶುಲ್ಕವಿಲ್ಲದೇ ಭರ್ತಿ ಮಾಡಿ ಸಂಬಂಧಿಸಿದ ಅದೇ ಗ್ರಾಮ ಪಂಚಾಯಿತಿ ಕಾರ್ಯಾಲಯಗಳಿಗೆ ಅರ್ಜಿಗಳನ್ನು ಖುದ್ದು ಸಲ್ಲಿಸುವುದು.

ಸ್ವೀಕೃತಿ ಕಾಲಮಿತಿ:

ಅರ್ಜಿ ಸಲ್ಲಿಸಲು ನಿಗದಿಪಡಿಸಿರುವ ಪ್ರಾರಂಭಿಕ ದಿನಾಂಕ	25.07.2024
ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ	13.08.2024

ವಿಶೇಷ ಸೂಚನೆ:

- ಅಭ್ಯರ್ಥಿಗಳು ಅರ್ಜಿಯನ್ನು ಭರ್ತಿ ಮಾಡಲು ಮೊದಲು ಎಲ್ಲಾ ವಿವರಗಳನ್ನು ಓದಿ.
- ಅರ್ಥೈಸಿಕೊಂಡು ಆ ನಂತರವೇ ತಮಗೆ ಅನ್ವಯವಾಗುವ ವಿವರಗಳನ್ನು ಭರ್ತಿ ಮಾಡತಕ್ಕದ್ದು.
- ಒಮ್ಮೆ ಅರ್ಜಿ ಸಲ್ಲಿಸಿದ ನಂತರ ಅರ್ಜಿಯಲ್ಲಿ ವಿವರಗಳನ್ನು ತಿದ್ದುಪಡಿ/ಸೇರ್ಪಡೆ ಮಾಡುವಂತೆ ನೀಡುವ ಯಾವುದೇ ಮನವಿಗಳನ್ನು ತಿರಸ್ಕರಿಸಲಾಗುವುದು.
- ಅರ್ಜಿ ಸಲ್ಲಿಸುವ ಸಮಯದಲ್ಲಿ ಮೀಸಲಾತಿಯನ್ನು ಕೋರದೆ ತದನಂತರದಲ್ಲಿ ಮೀಸಲಾತಿಯನ್ನು ಪರಿಗಣಿಸುವಂತೆ ಕೋರಿ ಸಲ್ಲಿಸುವ ಮನವಿ/ದಾಖಲೆಗಳನ್ನು ಪರಿಗಣಿಸಲಾಗುವುದಿಲ್ಲ.

ಅರ್ಜಿ ಸಲ್ಲಿಸುವ ಹಂತಗಳು/ಅರ್ಜಿ ಸಲ್ಲಿಸುವ ಪ್ರಕ್ರಿಯೆ:-

ಅಭ್ಯರ್ಥಿಯು ಅರ್ಜಿ ಭರ್ತಿಮಾಡಿ ಸಲ್ಲಿಸಿದ ಮಾತ್ರಕ್ಕೆ ಅಭ್ಯರ್ಥಿಗಳು ಅಧಿಸೂಚನೆಯಲ್ಲಿನ ಎಲ್ಲಾ ಷರತ್ತುಗಳನ್ನು ಪೂರೈಸಿರುತ್ತಾರೆ ಎಂದಲ್ಲ ತದನಂತರದಲ್ಲಿ ಅರ್ಜಿಗಳನ್ನು ಪರಿಶೀಲನೆಗೆ ಒಳಪಡಿಸಲಾಗುವುದು ಹಾಗೂ ಯಾವುದೇ ಹಂತದಲ್ಲಿ ನ್ಯೂನತೆಗಳು ಕಂಡುಬಂದಲ್ಲಿ ಅಂತಹ ಅಭ್ಯರ್ಥಿಗಳ ಅರ್ಜಿಗಳನ್ನು ತಿರಸ್ಕರಿಸಲಾಗುವುದು.

For more job news visit : www.kpscvaani.com

ಅರ್ಜಿ ಸಲ್ಲಿಸುವ ಪ್ರಕ್ರಿಯೆಯು ಅಭ್ಯರ್ಥಿಗಳು ಸೂಚನೆಯಲ್ಲಿ ನೀಡಿರುವ ಅಂಶಗಳನ್ನು ಹಾಗೂ ಎಲ್ಲಾ ಸೂಚನೆಗಳನ್ನು ಓದಿದ ನಂತರವೇ ಅರ್ಜಿಯನ್ನು ಭರ್ತಿಮಾಡತಕ್ಕದ್ದು.

ಅಭ್ಯರ್ಥಿಗಳು ಅರ್ಜಿ ಭರ್ತಿ ಮಾಡುವ ಮೊದಲು ಅಧಿಸೂಚನೆಯಲ್ಲಿ ನೀಡಿರುವ ಸೂಚನೆಗಳು, ಅರ್ಹತಾ ಷರತ್ತುಗಳನ್ನು ಓದಿಕೊಳ್ಳತಕ್ಕದ್ದು. ನೇಮಕಾತಿ ಪ್ರಾಧಿಕಾರವು ದೃಢೀಕರಿಸಿ ನೀಡಿರುವ ಹುದ್ದೆಗಳ ಮೀಸಲಾತಿಗೆ ಸಂಬಂಧಿಸಿದ ಅಂಕಣದಲ್ಲಿ ಉಪಯೋಗಿಸಿದ ಪದಗಳ ಅರ್ಥವನ್ನು ಈ ಕೆಳಕಂಡಂತೆ ಅರ್ಥೈಸಿಕೊಳ್ಳಬೇಕು:-

ಸಾ.ಅ	ಸಾಮಾನ್ಯ ಅಭ್ಯರ್ಥಿ	GM	General Merit
ಪ.ಜಾತಿ	ಪರಿಶಿಷ್ಟ ಜಾತಿ	SC	Scheduled Caste
ಪ.ಪಂ	ಪರಿಶಿಷ್ಟ ಪಂಗಡ	ST	Scheduled Tribe
ಪ್ರ-1	ಪ್ರವರ್ಗ-1	Cat-1	Category - 1
2ಎ	ಪ್ರವರ್ಗ-2ಎ	2A	Category - 2A
2ಬಿ	ಪ್ರವರ್ಗ-2ಬಿ	2B	Category - 2B
3ಎ	ಪ್ರವರ್ಗ-3ಎ	3A	Category - 3A
3ಬಿ	ಪ್ರವರ್ಗ-3ಬಿ	3B	Category - 3B
ಗ್ರಾಮೀಣ	ಗ್ರಾಮೀಣ ಅಭ್ಯರ್ಥಿ	Rural	Rural Candidate
ಕ.ಮಾ.ಅ	ಕನ್ನಡ ಮಾಧ್ಯಮ ಅಭ್ಯರ್ಥಿ	KMS	Kannada Medium Student
ಅಂ.ವಿ	ಅಂಗವಿಕಲ ಅಭ್ಯರ್ಥಿ	PH	Physically Handicapped
ಮ.ಅ	ಮಹಿಳಾ ಅಭ್ಯರ್ಥಿ	WC	Women Candidate

ಅರ್ಹತಾ ಷರತ್ತುಗಳು:

(ಅ)	ಭಾರತೀಯ ನಾಗರೀಕನಾಗಿರತಕ್ಕದ್ದು.
(ಆ)	ಒಬ್ಬ ಜೀವಂತ ಪತ್ನಿಗಿಂತ ಹೆಚ್ಚು ಮಂದಿ ಪತ್ನಿಯರನ್ನು ಹೊಂದಿರುವ ಪುರುಷ ಅಭ್ಯರ್ಥಿ ಮತ್ತು ಈಗಾಗಲೇ ಇನ್ನೊಬ್ಬ ಹೆಂಡತಿ ಇರುವ ವ್ಯಕ್ತಿಯನ್ನು ಮದುವೆಯಾಗಿರುವ ಮಹಿಳಾ ಅಭ್ಯರ್ಥಿಯು ಸರ್ಕಾರದಿಂದ ಪೂರ್ವಾನುಮತಿಯನ್ನು ಪಡೆಯದೇ ನೇಮಕಾತಿಗೆ ಅರ್ಹರಾಗುವುದಿಲ್ಲ.
ಇ)	ಅಭ್ಯರ್ಥಿಯು ಮಾನಸಿಕವಾಗಿ ಮತ್ತು ದೈಹಿಕವಾಗಿ ಆರೋಗ್ಯವಂತರಾಗಿರಬೇಕು ಮತ್ತು ಅವರ ನೇಮಕಾತಿಯು ಕರ್ತವ್ಯಗಳ ದಕ್ಷ ನಿರ್ವಹಣೆಗೆ ಆತಂಕವನ್ನುಂಟು ಮಾಡುವ ಸಂಭವ ಇರುವ ಯಾವುದೇ ದೈಹಿಕ ನ್ಯೂನತೆಯಿಂದ ಮುಕ್ತರಾಗಿರಬೇಕು.
ಈ)	ದೈಹಿಕವಾಗಿ ಅನರ್ಹರಾಗಿದ್ದಾರೆಂಬುದಾಗಿ ವೈದ್ಯಕೀಯ ಮಂಡಳಿಯ ವರದಿಯ ಮೇಲೆ ಅನರ್ಹರೆಂಬುದಾಗಿ ತಿರಸ್ಕರಿಸುವ ಪೂರ್ಣ ವಿವೇಚನೆಯನ್ನು ರಾಜ್ಯ ಸರ್ಕಾರವು ಕಾದಿರಿಸಿಕೊಂಡಿದೆ ಮತ್ತು ಸರ್ಕಾರದ ವಿವೇಚನೆಯು ಯಾವುದೇ ವಿಧದಲ್ಲೂ ಈ ನಿಯಮಗಳ ಮೂಲಕ ಸೀಮಿತವಾಗಿರುವುದಿಲ್ಲ.

ನಿಗಧಿತ ಶೈಕ್ಷಣಿಕ ಅರ್ಹತೆಯ ಜೊತೆಗೆ ಈ ಮೇಲ್ಕಂಡ ಅರ್ಹತೆಗಳನ್ನು ಹೊಂದಿರುವ ಅಭ್ಯರ್ಥಿಗಳು ನೇಮಕಾತಿಗಾಗಿ ಅರ್ಜಿ ಸಲ್ಲಿಸಲು ಅರ್ಹತೆಯನ್ನು ಹೊಂದಿರುತ್ತಾರೆ.

ಆಯ್ಕೆ ವಿಧಾನ:-

• ಶೈಕ್ಷಣಿಕ ಅರ್ಹತೆಯಲ್ಲಿನ ಮೆರಿಟ್ ಮತ್ತು ರೋಷ್ಟರ್ ಮೀಸಲಾತಿ ಆಧಾರದ ಮೇಲೆ ಅಭ್ಯರ್ಥಿಗಳನ್ನು ಆಯ್ಕೆ ಮಾಡಲಾಗುವುದು. ಒಂದು ವೇಳೆ ಇಬ್ಬರು ಅಥವಾ ಹೆಚ್ಚಿನ ಅಭ್ಯರ್ಥಿಗಳು ಸಮಾನವಾದ ಅಂಕಗಳನ್ನು/ಮೆರಿಟನ್ನು ಹೊಂದಿದಲ್ಲಿ ವಯಸ್ಸಿನಲ್ಲಿ ಹಿರಿಯರಾದವರನ್ನು ಆಯ್ಕೆಗೆ ಪರಿಗಣಿಸಲಾಗುವುದು, ಅದರಂತೆ ತಾತ್ಕಾಲಿಕ ಆಯ್ಕೆ ಪಟ್ಟಿಯನ್ನು ಪ್ರಕಟಿಸಲಾಗುವುದು.

• ಗ್ರಂಥಾಲಯ ಮೇಲ್ವಿಚಾರಕರ ಹುದ್ದೆಗೆ ಸಂಬಂಧಿಸಿದಂತೆ ಸರ್ಟಿಫಿಕೇಷನ್ ಕೋರ್ಸ್ ಇನ್ ಲೈಬ್ರರಿ ಸೈನ್ಸ್ ಪದವಿ ಪಡೆದಿರುವ ಅಭ್ಯರ್ಥಿಗಳು ಅರ್ಜಿ ಸಲ್ಲಿಸದಿದ್ದಲ್ಲಿ ಪಿ.ಯು.ಸಿ ಪರೀಕ್ಷೆಯಲ್ಲಿ ಅಭ್ಯರ್ಥಿಯು ಗಳಿಸಿದ ಅಂಕಗಳನ್ನು ಆಧರಿಸಿ ಮೀಸಲಾತಿ ಬಿಂದುವಿನಂತೆ ಆಯ್ಕೆಗೆ ಪರಿಗಣಿಸಲಾಗುವುದು. ಒಂದು ವೇಳೆ ಇಬ್ಬರು

For more job news visit : www.kpscvaani.com

ಹಿರಿಯರಾದವರನ್ನು ಆಯ್ಕೆಗೆ ಪರಿಗಣಿಸಲಾಗುವುದು.

• ತಾತ್ಕಾಲಿಕ ಆಯ್ಕೆ ಪಟ್ಟಿಯನ್ನು ಆಯಾ ಗ್ರಾಮ ಪಂಚಾಯಿತಿಯ ಸೂಚನಾ ಫಲಕದಲ್ಲಿ ಪ್ರಕಟಿಸಲಾಗುವುದು. ತಾತ್ಕಾಲಿಕ ಆಯ್ಕೆ ಪಟ್ಟಿಗೆ ಸಂಬಂಧಿಸಿದಂತೆ ಆಕ್ಷೇಪಣೆ/ಸಲಹೆಗಾಗಿ ಹದಿನೈದು ದಿನಗಳ ಕಾಲಾವಕಾಶವನ್ನು ನೀಡಲಾಗುವುದು ಹಾಗೂ ಆಕ್ಷೇಪಣೆ/ಸಲಹೆಗಳನ್ನು ಪರಿಶೀಲಿಸಿ ಅಂತಿಮ ಆಯ್ಕೆ ಪಟ್ಟಿಯನ್ನು ಪ್ರಕಟಿಸಲಾಗುವುದು.

ಶೈಕ್ಷಣಿಕ ವಿದ್ಯಾರ್ಹತೆ ಮತ್ತು ವಯೋಮಿತಿ:-

1) **ಶೈಕ್ಷಣಿಕ ವಿದ್ಯಾರ್ಹತೆ:-**

• ದ್ವಿತೀಯ ಪದವಿ ಪೂರ್ವ ಪರೀಕ್ಷೆ (ಪಿ.ಯು.ಸಿ)ಯಲ್ಲಿ ಉತ್ತೀರ್ಣರಾಗಿರಬೇಕು ಮತ್ತು ಸರ್ಟಿಫೀಕೇಷನ್ ಕೋರ್ಸ್ ಇನ್ ಲೈಬ್ರರಿ ಸೈನ್ಸ್ ನಲ್ಲಿ ಪ್ರಮಾಣ ಪತ್ರ ಪಡೆದಿರತಕ್ಕದ್ದು ಹಾಗೂ ಕನಿಷ್ಠ ಮೂರು ತಿಂಗಳ ಕಂಪ್ಯೂಟರ್ ಕೋರ್ಸ್ನಲ್ಲಿ ಉತ್ತೀರ್ಣರಾಗಿರಬೇಕು.

• ಒಂದು ವೇಳೆ ಸರ್ಟಿಫೀಕೇಷನ್ ಕೋರ್ಸ್ ಇನ್ ಲೈಬ್ರರಿ ಸೈನ್ಸ್ ಪದವಿ ಪಡೆದಿರುವ ಅಭ್ಯರ್ಥಿಗಳು ಅರ್ಜಿ ಸಲ್ಲಿಸದಿದ್ದಲ್ಲಿ ಪಿ.ಯು.ಸಿ. ಪರೀಕ್ಷೆಯಲ್ಲಿ ಅಭ್ಯರ್ಥಿಯು ಗಳಿಸಿದ ಅಂಕಗಳನ್ನು ಆಧರಿಸಿ ಅಧಿಸೂಚಿಸಿದ ಖಾಲಿ ಹುದ್ದೆಗಳಿಗೆ ಮೀಸಲಾತಿ ಬಿಂದುವಿನಂತೆ ಆಯ್ಕೆಗೆ ಪರಿಗಣಿಸಲಾಗುವುದು.

• ಈ ವಿದ್ಯಾರ್ಹತೆಯನ್ನು ಅಧಿಸೂಚನೆ ಹೊರಡಿಸುವ ದಿನಾಂಕಕ್ಕೆ ಮುಂಚಿತವಾಗಿ ಹೊಂದಿರಬೇಕು. ವಿದ್ಯಾರ್ಹತೆಯ ದಾಖಲಾತಿಗಳ ನೈಜತೆ ಬಗ್ಗೆ ಸಂಬಂಧಪಟ್ಟ ಸಕ್ಷಮ ಪ್ರಾಧಿಕಾರದಿಂದ ದೃಡಿಪಡಿಸಿಕೊಂಡ ನಂತರ ನೇಮಕಾತಿ ಆದೇಶ ನೀಡಲಾಗುವುದು.

2) **ವಯೋಮಿತಿ:-** ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಅಧಿಸೂಚನೆಯಲ್ಲಿ ನಮೂದಿಸಿದಂತೆ ಅಭ್ಯರ್ಥಿಯು ಕನಿಷ್ಠ 18 ವರ್ಷ ವಯಸ್ಸನ್ನು ಪೂರೈಸಿರತಕ್ಕದ್ದು ಹಾಗೂ ಗರಿಷ್ಠ ವಯೋಮಿತಿಯು ಈ ಕೆಳಕಂಡಂತೆ ಇರತಕ್ಕದ್ದು.

ಎ	ಸಾಮಾನ್ಯ ವರ್ಗ	35ವರ್ಷ
ಬಿ	2ಎ, 2ಬಿ, 3ಎ, 3ಬಿ	38ವರ್ಷ
ಸಿ	ಪ.ಜಾತಿ/ಪ.ಪಂಗಡ/ಪ್ರವರ್ಗ-1	40ವರ್ಷ

3) **ವಾಸ ಸ್ಥಳ:-**

ಗ್ರಾಮ ಪಂಚಾಯಿತಿ ಗ್ರಂಥಾಲಯ ಮತ್ತು ಮಾಹಿತಿ ಕೇಂದ್ರಗಳ ಮೇಲ್ವಿಚಾರಕರ ಹುದ್ದೆಗೆ ಅರ್ಜಿ ಸಲ್ಲಿಸುವ ಅಭ್ಯರ್ಥಿಗಳು ಸಂಬಂಧಪಟ್ಟ ಗ್ರಾಮ ಪಂಚಾಯಿತಿ ವ್ಯಾಪ್ತಿಯ ನಿವಾಸಿಯಾಗಿರತಕ್ಕದ್ದು ಪರಂತು ಸಂಬಂಧಪಟ್ಟ ಗ್ರಾಮ ಪಂಚಾಯಿತಿ ವ್ಯಾಪ್ತಿಯ ನಿವಾಸಿ ಲಭ್ಯತೆ ಇಲ್ಲದೆ ಇದ್ದಲ್ಲಿ ಆಯಾ ತಾಲ್ಲೂಕು ವ್ಯಾಪ್ತಿಯಲ್ಲಿನ ಬೇರೆ ಗ್ರಾಮ ಪಂಚಾಯಿತಿಯ ಅಭ್ಯರ್ಥಿಗಳನ್ನು ಆಯ್ಕೆಗೆ ಪರಿಗಣಿಸಲಾಗುವುದು. ಸಂಬಂಧಿಸಿದಂತೆ ಸಕ್ಷಮ ಪ್ರಾಧಿಕಾರವಾದ ತಹಶೀಲ್ದಾರ ಇವರಿಂದ ವಾಸಸ್ಥಳ ಪ್ರಮಾಣ ಪತ್ರವನ್ನು ಪಡೆದು ಸಲ್ಲಿಸತಕ್ಕದ್ದು.

1ನೇ ವೃತ್ತದ 06ನೇ ಬಿಂದುವಿನಿಂದ 15ನೇ ಬಿಂದುವಿನವರೆಗೆ

ಮೀಸಲಾತಿ	ಇತರೆ	ಮಹಿಳೆ	ಗ್ರಾಮೀಣ	ಮಾ.ಸೈ	ಕ.ಮಾ.ಅ	ಅಂ.ವಿ	ಯೋ.ನಿ.ಅ	ತೃ.ಲಿಂಗಿ	ಒಟ್ಟು
ಪ.ಜಾ	01	01	–	–	–	–	–	–	02
ಪ.ಪಂ	–	–	–	–	–	–	–	–	–
ಪ್ರವರ್ಗ-1	–	–	–	–	–	–	–	–	–
ಪ್ರ 2(ಎ)	–	–	–	–	–	–	–	–	–
ಪ್ರ 2(ಬಿ)	01	–	–	–	–	–	–	–	01
ಪ್ರ 3(ಎ)	–	–	–	–	–	–	–	–	–
ಪ್ರ 3(ಬಿ)	–	–	–	–	–	–	–	–	–
ಸಾ.ಅ	–	–	–	–	–	*01BLV	-	–	01
ಒಟ್ಟು	02	01	–	–	–	01	–	–	04

ಅಂಗವಿಕಲ ಅಭ್ಯರ್ಥಿಯ ಅಂಗ ವಿಕಲತೆ ಸ್ವರೂಪ * B, LV (Blind & Low Vision)

For more job news visit : www.kpscvaani.com

ಬೆಂಗಳೂರು ನಗರ ಜಿಲ್ಲಾ ಪಂಚಾಯಿತಿ ವ್ಯಾಪ್ತಿಯ ಗ್ರಾಮ ಪಂಚಾಯಿತಿ ಗ್ರಂಥಾಲಯ ಮತ್ತು ಮಾಹಿತಿ ಕೇಂದ್ರಗಳ ಮೇಲ್ವಿಚಾರಕರ 4 ಖಾಲಿ ಹುದ್ದೆಗಳಿಗೆ ಲಂಬ ಮತ್ತು ಸಮತಳ ಮೀಸಲಾತಿಯನ್ನು ಗ್ರಾಮ ಪಂಚಾಯಿತಿ ಗ್ರಂಥಾಲಯ ಮತ್ತು ಮಾಹಿತಿ ಕೇಂದ್ರಗಳಲ್ಲಿ ತೆರವಾದ ಹುದ್ದೆಗಳನ್ನು ಹಿರಿಯ ಶ್ರೇಣಿಯ ಮೂಲಕ ಮೀಸಲಾತಿ ನಿಗದಿಪಡಿಸಿದ ವಿವರ ಈ ಕೆಳಕಂಡಂತೆ ಇದೆ.

ಬಿಂದು ಸಂಖ್ಯೆ	ತಾಲ್ಲೂಕು	ಗ್ರಾಮ ಪಂಚಾಯಿತಿ ಹೆಸರು	ಗ್ರಾಮ ಪಂಚಾಯಿತಿ ಗ್ರಂಥಾಲಯ ಮತ್ತು ಮಾಹಿತಿ ಕೇಂದ್ರದ ಹೆಸರು	ಮೀಸಲಾತಿ ಬಿಂದು	ನಿಗದಿಪಡಿಸಲಾದ ಮೀಸಲಾತಿ		ಹುದ್ದೆಗಳ ಸಂಖ್ಯೆ
1.	ಯಲಹಂಕ	ಅರಕೆರೆ	ಬಸವಲಿಂಗಪ್ಪನಗರ	01	ಪ.ಜಾತಿ	ಇತರೆ	01
2.	ಬೆಂ. ಉತ್ತರ	ಅಡಕಮಾರನಹಳ್ಳಿ	ಅಡಕಮಾರನಹಳ್ಳಿ	08	ಸಾ.ಅ	ಅಂ.ವಿ	01
3.	ಬೆಂ. ಪೂರ್ವ	ಕಿತ್ತಗನೂರು	ಕಿತ್ತಗನೂರು	09	ಪ.ಜಾತಿ	ಮ.ಅ	01
4.	ಯಲಹಂಕ	ಮೀನುಕುಂಟೆ	ಮೀನುಕುಂಟೆ	11	ಪ್ರವರ್ಗ-2ಬಿ	ಇತರೆ	01

ಸರ್ಕಾರದ ಆದೇಶ ಸಂಖ್ಯೆ:RDPR 425 ಜಿಪಅ 2023 ದಿ: 14-08-2023 ರಂತೆ ಗ್ರಾಮ ಪಂಚಾಯಿತಿ ಗ್ರಂಥಾಲಯ ಮೇಲ್ವಿಚಾರಕರಿಗೆ ಪ್ರತಿ ಮಾಹೆ ಮಾಸಿಕ ಕನಿಷ್ಠ ವೇತನ ರೂ.15,196.72/- ಹಾಗೂ ಕನಿಷ್ಠ ವೇತನದ ಜೊತೆಗೆ ಕಾರ್ಮಿಕ ಇಲಾಖೆಯು ಕಾಲಕಾಲಕ್ಕೆ ನಿಗದಿಪಡಿಸುವ ವ್ಯತ್ಯಯವಾಗುವ ತುಟ್ಟಿ ಭತ್ಯೆಯನ್ನು (VDA) ಪಾವತಿಸಲಾಗುವುದು.

ಅರ್ಜಿಗಳ ಸೂಕ್ಷ್ಮ ಪರಿಶೀಲನೆ:-

ಈ ಹುದ್ದೆಗಳಿಗೆ ಅರ್ಜಿ ಸಲ್ಲಿಸುವ ಲಗತ್ತುಗಳ ಆಧಾರದ ಮೇಲೆ ಮಾತ್ರವೇ ದಾಖಲೆಗಳ ಪರಿಶೀಲನೆ ಮಾಡಲಾಗುವುದು. ಅವಶ್ಯಕ ಸಂದರ್ಭಗಳಲ್ಲಿ ಮೂಲ ದಾಖಲೆಗಳ ಪರಿಶೀಲನೆಯನ್ನು ನಡೆಸಲು ತೀರ್ಮಾನಿಸಿದಲ್ಲಿ ಅರ್ಜಿಯೊಂದಿಗೆ ಸಲ್ಲಿಸಿದ ಪ್ರಮಾಣ ಪತ್ರಗಳ ಮೂಲ ಪ್ರತಿಗಳನ್ನು ತಪ್ಪದೇ ಹಾಜರುಪಡಿಸತಕ್ಕದ್ದು. ಏನೇ ಸಂದರ್ಭವಿದ್ದರೂ ವಯೋಮಿತಿ, ವಿದ್ಯಾರ್ಹತೆ ಮತ್ತು ಮೀಸಲಾತಿಗಳಿಗೆ ಅರ್ಜಿಯನ್ನು ಸಲ್ಲಿಸುವ ಸಂದರ್ಭದಲ್ಲಿ ಲಗತ್ತಿಸಿದ ಪ್ರಮಾಣ ಪತ್ರಗಳನ್ನೇ ಅಂತಿಮವೆಂದು ತೀರ್ಮಾನಿಸಲಾಗುತ್ತದೆ. ಆದ್ದರಿಂದ ಅಭ್ಯರ್ಥಿಗಳು ಜಾಗರೂಕತೆಯಿಂದ ತಮಗೆ ಅನ್ವಯಿಸುವ ಎಲ್ಲಾ ದಾಖಲೆಗಳನ್ನು ಸ್ಪಷ್ಟವಾಗಿ ಗೋಚರಿಸುವ ರೀತಿಯಲ್ಲಿ ಭರ್ತಿ ಮಾಡತಕ್ಕದ್ದು.

ಆದ್ದರಿಂದ ಈ ಕೆಳಕಂಡ ಪ್ರಮಾಣ ಪತ್ರಗಳನ್ನು ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಚಾಲ್ತಿಯಲ್ಲಿರುವಂತೆ ಕಡ್ಡಾಯವಾಗಿ ಪಡೆದಿಟ್ಟುಕೊಂಡು ಅರ್ಜಿಯೊಂದಿಗೆ ಭರ್ತಿ ಮಾಡಬೇಕು ತಪ್ಪಿದ್ದಲ್ಲಿ ಅವರ ಮೀಸಲಾತಿ/ಅಭ್ಯರ್ಥಿತ್ವವನ್ನು ಪರಿಗಣಿಸಲಾಗುವುದಿಲ್ಲ.

1) ಹುದ್ದೆಗೆ ನಿಗದಿಪಡಿಸಲಾದ ವಿದ್ಯಾರ್ಹತೆಯನ್ನು ಅರ್ಜಿ ಸಲ್ಲಿಸಲು ನಿಗಧಿಪಡಿಸಿದ ಕೊನೆಯ ದಿನಾಂಕದೊಳಗೆ ಪಡೆದಿರುವ ಬಗ್ಗೆ ಪ್ರಮಾಣ ಪತ್ರಗಳು/ಎಲ್ಲಾ ವರ್ಷಗಳ ಅಂಕಪಟ್ಟಿಗಳು ಕಡ್ಡಾಯವಾಗಿರುತ್ತದೆ.

2) ಜನ್ಮ ದಿನಾಂಕವನ್ನು ನಮೂದಿಸಿರುವ ಎಸ್.ಎಸ್.ಎಲ್.ಸಿ ಅಥವಾ ತತ್ಸಮಾನ ಪರೀಕ್ಷೆಯ ಅಂಕಪಟ್ಟಿ/ಎಸ್.ಎಸ್.ಎಲ್.ಸಿ ವರ್ಗಾವಣೆಯ ಪ್ರಮಾಣ ಪತ್ರ/ಜನ್ಮ ದಿನಾಂಕವನ್ನು ತೋರಿಸುವ ಸಂಚಿತ ದಾಖಲೆಯ ಉದ್ಧೃತಭಾಗ (Extract of cumulative record)

3) ಅಭ್ಯರ್ಥಿಯು ಸ್ಥಳೀಯ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ವಾಸಿಸುತ್ತರುವ ಬಗ್ಗೆ ವಾಸಸ್ಥಳ ದೃಢೀಕರಣ ಪತ್ರ.

4) ಮಾನ್ಯತೆ ಪಡೆದ ಸಂಸ್ಥೆಗಳಿಂದ ಕನಿಷ್ಠ ಮೂರು ತಿಂಗಳ ತರಬೇತಿ ಹೊಂದಿದ ಗಣಕಯಂತ್ರ ಪ್ರಮಾಣ ಪತ್ರ.

5) ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಪ್ರವರ್ಗ-1, ಪ್ರವರ್ಗ-2ಎ, 2ಬಿ, 3ಎ, 3ಬಿ ಮೀಸಲಾತಿ ಅಭ್ಯರ್ಥಿಗಳು ನಮೂನೆ ಡಿ/ಇ/ಎಫ್ ನಲ್ಲಿ ತಹಶೀಲ್ದಾರ್‌ರಿಂದ ಪಡೆದ ಪ್ರಮಾಣ ಪತ್ರ (ಮೀಸಲಾತಿ ಕೋರಿದ್ದಲ್ಲಿ)

6) ಸಾಮಾನ್ಯ ಅರ್ಹತೆ ಅಭ್ಯರ್ಥಿಗಳು ಗ್ರಾಮೀಣ ಮೀಸಲಾತಿ ಪ್ರಮಾಣ ಪತ್ರ ನಮೂನೆ-1 ಮತ್ತು 2ರಲ್ಲಿ/ಇತರೆ ಅಭ್ಯರ್ಥಿಗಳು ನಮೂನೆ-2ರಲ್ಲಿ (ಮೀಸಲಾತಿ ಕೋರಿದ್ದಲ್ಲಿ)

For more job news visit : www.kpscvaani.com

ಮೀಸಲಾತಿ ಪ್ರಮಾಣ ಪತ್ರಗಳು:-

<table>
<tr><td rowspan="5">1) ಜಾತಿ/ಮೀಸಲಾತಿ ಪ್ರಮಾಣ ಪತ್ರಗಳು</td><td colspan="2">ಮೀಸಲಾತಿ ಪ್ರಮಾಣ ಪತ್ರಗಳನ್ನು ಸಲ್ಲಿಸಬೇಕಾದ ನಮೂನೆಗಳು:-</td></tr>
<tr><td>ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಕ್ಕೆ ಸೇರಿದ ಅಭ್ಯರ್ಥಿಗಳು</td><td>ನಮೂನೆ 'ಡಿ'</td></tr>
<tr><td>ಪ್ರವರ್ಗ-1ಕ್ಕೆ ಸೇರಿದ ಅಭ್ಯರ್ಥಿಗಳು</td><td>ನಮೂನೆ'ಇ'</td></tr>
<tr><td>ಪ್ರವರ್ಗ-2ಎ, 2ಬಿ, 3ಎ ಮತ್ತು 3ಬಿ ಮೀಸಲಾತಿಗೆ ಸೇರಿದ ಅಭ್ಯರ್ಥಿಗಳು</td><td>ನಮೂನೆ 'ಎಫ್'</td></tr>
<tr><td colspan="2">*ನಮೂನೆಗಳನ್ನು ಅಧಿಸೂಚನೆಯ ಕೊನೆಯಲ್ಲಿ ತೋರಿಸಲಾಗಿದೆ.
ಹಿಂದುಳಿದ ವರ್ಗಗಳ ಪ್ರವರ್ಗ-2(ಎ), ಪ್ರವರ್ಗ-2(ಬಿ), ಪ್ರವರ್ಗ-3(ಎ) ಮತ್ತು ಪ್ರವರ್ಗ-3(ಬಿ) ಮೀಸಲಾತಿ ಪ್ರಮಾಣ ಪತ್ರಗಳು 05 ವರ್ಷ ಚಾಲ್ತಿಯಲ್ಲಿರುತ್ತದೆ. (Government Notification No SWD 155 BCA 2012 Dt:17-02-2012 ರನ್ವಯ) ಅಭ್ಯರ್ಥಿಗಳು ಪಡೆದಿರುವ ಪ್ರಮಾಣ ಪತ್ರವು ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಚಾಲ್ತಿಯಲ್ಲಿರುವಂತೆ ಪಡೆದಿಟ್ಟಕೊಂಡು ಅರ್ಜಿ ಸಲ್ಲಿಸುವಾಗ ಅಪ್‌ಲೋಡ್ ಮಾಡತಕ್ಕದ್ದು. ಪ.ಜಾ/ಪ.ಪಂ/ಪ್ರ.೧ರ ಅಭ್ಯರ್ಥಿಗಳು ಪಡೆದಿರುವ/ಪಡೆಯುವ ಪ್ರಮಾಣ ಪತ್ರಗಳು ಜೀವಿತ ಅವಧಿಯವರೆಗೆ ಅಥವಾ ರದ್ದು ಮಾಡುವವರೆವಿಗೆ ಸಿಂಧುತ್ವವನ್ನು ಹೊಂದಿದ್ದು, ಇಂತಹ ಪ್ರಮಾಣ ಪತ್ರಗಳನ್ನು ದಿನಾಂಕದ ಮಿತಿಯಲ್ಲದೇ ಪರಿಗಣಿಸಲಾಗುವುದು. (ಸರ್ಕಾರದ ಸುತ್ತೋಲೆ ಸಂಖ್ಯೆ: SWD 155 BCA 2011 Dt:22.02.2012)</td></tr>
<tr><td rowspan="3">2) ಗ್ರಾಮೀಣ ಅಭ್ಯರ್ಥಿಗಳಿಗೆ ಮೀಸಲಾತಿ</td><td colspan="2">ಸರ್ಕಾರಿ ಆದೇಶ ಸಂಖ್ಯೆ: ಸಿಆಸುಇ 08 ಸೆನೆನಿ 2001 ದಿನಾಂಕ: 13-02-2001 ರನ್ವಯ ಗ್ರಾಮೀಣ ಮೀಸಲಾತಿಯನ್ನು ಕೋರುವ ಅಭ್ಯರ್ಥಿಗಳು ಪ್ರಸ್ತುತ ಚಾಲ್ತಿಯಲ್ಲಿರುವ ನಿಯಮಗಳ ರೀತ್ಯಾ 1 ರಿಂದ 10ನೇ ತರಗತಿಯವರೆಗೆ ಗ್ರಾಮೀಣ ಮೀಸಲಾತಿಗೆ ಒಳಪಡುವ ಪ್ರದೇಶಗಳಲ್ಲಿ ವ್ಯಾಸಂಗ ಮಾಡಿ ಉತ್ತೀರ್ಣರಾಗಿರುವವರು ಈ ಮೀಸಲಾತಿಯನ್ನು ಪಡೆಯಲು ಅರ್ಹರು.</td></tr>
<tr><td colspan="2">ಗ್ರಾಮೀಣ ಅಭ್ಯರ್ಥಿಗಳೆಂದು ಮೀಸಲಿರಿಸಿದ ಹುದ್ದೆಗಳನ್ನು ಕ್ಲೇಮ್ ಮಾಡುವ ಸಾಮಾನ್ಯ ಅರ್ಹತೆಯ ಅಭ್ಯರ್ಥಿಗಳು ನಮೂನೆ-2ನ್ನು ಸಂಬಂಧಪಟ್ಟ ಕ್ಷೇತ್ರ ಶಿಕ್ಷಣಾಧಿಕಾರಿಯವರ ಮೇಲು ರುಜುವಿನೊಂದಿಗೆ ಹಾಗೂ ಈ ಪ್ರಮಾಣ ಪತ್ರವಲ್ಲದೇ ಮೇಲುಸ್ತರಕ್ಕೆ (Creamu layer) ಸೇರಿಲ್ಲದಿರುವ ಬಗ್ಗೆ ನಮೂನೆ-1 ರಲ್ಲಿ ಪ್ರಮಾಣಪತ್ರವನ್ನು ಕಡ್ಡಾಯವಾಗಿ ಸಂಬಂಧಿತ ತಹಶೀಲ್ದಾರ್‌ರವರಿಂದ ಪಡೆದಿಟ್ಟಿಕೊಂಡಿರತಕ್ಕದ್ದು (ಈ ಪ್ರಮಾಣ ಪತ್ರದ ನಮೂನೆಯನ್ನು ಅಧಿಸೂಚನೆಯ ಕೊನೆಯಲ್ಲಿ ತೋರಿಸಲಾಗಿದೆ) ನಮೂನೆ-1ರಲ್ಲಿ ಪಡೆದಿರುವ ಪ್ರಮಾಣ ಪತ್ರವು ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಚಾಲ್ತಿಯಲ್ಲಿರತಕ್ಕದ್ದು ಹಾಗೂ ಅಭ್ಯರ್ಥಿಗಳು ತಮಗೆ ಸಂಬಂಧಿಸಿದ ಪ್ರಮಾಣ ಪತ್ರವನ್ನು ಅರ್ಜಿ ಸಲ್ಲಿಸುವಾಗ ಅಪ್ಲೋಡ್ ಮಾಡತಕ್ಕದ್ದು.</td></tr>
<tr><td colspan="2">ಅಂತೆಯೇ ಗ್ರಾಮೀಣ ಮೀಸಲಾತಿ ಕೋರುವ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಪ್ರವರ್ಗ-1, ಪ್ರವರ್ಗ-2ಎ, 2ಬಿ, 3ಎ, 3ಬಿ ಮೀಸಲಾತಿಗೆ ಸೇರಿದ ಅಭ್ಯರ್ಥಿಗಳು ಕಡ್ಡಾಯವಾಗಿ ಗ್ರಾಮೀಣ ಮೀಸಲಾತಿಯ ಪ್ರಮಾಣ ಪತ್ರವನ್ನು ನಮೂನೆ-2ರಲ್ಲಿ ಸಂಬಂಧಪಟ್ಟ ಕ್ಷೇತ್ರ ಶಿಕ್ಷಣಾಧಿಕಾರಿಯವರ ಮೇಲು ರುಜು ಮಾಡತಕ್ಕದ್ದು. (ಈ ಪ್ರಮಾಣ ಪತ್ರದ ನಮೂನೆಯನ್ನು ಅಧಿಸೂಚನೆಯ ಕೊನೆಯಲ್ಲಿ ತೋರಿಸಲಾಗಿದೆ) ತಪ್ಪಿದ್ದಲ್ಲಿ ಅಂತಹ ಅಭ್ಯರ್ಥಿಗಳ ಮೀಸಲಾತಿಯನ್ನು ರದ್ದುಪಡಿಸಲಾಗುವುದು ಹಾಗೂ ಅಂತಹವರು ಗ್ರಾಮೀಣ ಮೀಸಲಾತಿಗೆ ಅನರ್ಹರಾಗುತ್ತಾರೆ.</td></tr>
</table>

For more job news visit : www.kpscvaani.com

	ಜಾತಿ ಹಾಗೂ ಗ್ರಾಮೀಣ ಮೀಸಲಾತಿ ಕೋರಿರುವ ಅಭ್ಯರ್ಥಿಗಳ ಜಾತಿ ಮೀಸಲಾತಿ ಪ್ರಮಾಣ ಪತ್ರಗಳು ತಿರಸ್ಕೃತವಾದಲ್ಲಿ ಅಂತಹವರು ಗ್ರಾಮೀಣ ಮೀಸಲಾತಿಗೂ ಸಹ ಅನರ್ಹರಾಗುತ್ತಾರೆ.
3) ಕನ್ನಡ ಮಾಧ್ಯಮ ಅಭ್ಯರ್ಥಿಗಳಿಗೆ ಮೀಸಲಾತಿ	ಸರ್ಕಾರಿ ಅಧಿಸೂಚನೆ ಸಂಖ್ಯೆ ಸಿಆಸುಇ 71 ಸೆನೆನಿ 2001 ದಿನಾಂಕ: 24-10-2002 ರನ್ವಯ ಕನ್ನಡ ಮಾಧ್ಯಮದ ಅಭ್ಯರ್ಥಿಗಳಿಗೆಂದು ಮೀಸಲಿರುವ ಹುದ್ದೆಗಳನ್ನು ಕ್ಲೇಮು ಮಾಡುವ ಅಭ್ಯರ್ಥಿಗಳು 1ನೇ ತರಗತಿಯಿಂದ 10ನೇ ತರಗತಿಯವರೆಗೆ ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿರುವ ಬಗ್ಗೆ ಸಂಬಂಧಪಟ್ಟ ಶಾಲೆಯ ಮುಖ್ಯೋಪಾಧ್ಯಾಯರ ಸಹಿ, ಮೊಹರು ಮತ್ತು ಜಾರಿ ಮಾಡಿದ ದಿನಾಂಕದೊಂದಿಗೆ ನಿಗದಿತ ನಮೂನೆಯಲ್ಲಿ ಪಡೆದಿಟ್ಟುಕೊಂಡು ಅರ್ಜಿ ಸಲ್ಲಿಸುವಾಗ ಅಪ್‌ಲೋಡ್ ಮಾಡತಕ್ಕದ್ದು. (ಈ ಪ್ರಮಾಣ ಪತ್ರದ ನಮೂನೆಯನ್ನು ಅಧಿಸೂಚನೆಯ ಕೊನೆಯಲ್ಲಿ ತೋರಿಸಲಾಗಿದೆ)
4)ಅಂಗವಿಕಲ ಅಭ್ಯರ್ಥಿ	ಸರ್ಕಾರದ ಅಧಿಸೂಚನೆ ಸಂಖ್ಯೆ: ಡಿಪಿಎಆರ್ 149 ಎಸ್ ಆರ್ ಆರ್ 2020 ದಿನಾಂಕ: 25-09-2020 ರಲ್ಲಿ ರಾಜ್ಯ ಸಿವಿಲ್ ಸೇವೆಗಳ ಸಮೂಹ-'ಎ' ಮತ್ತು 'ಬಿ' ಗುಂಪಿನ ಹುದ್ದೆಗಳಿಗೆ ಶೇಕಡ 4 ರಷ್ಟು ಮತ್ತು ಗ್ರೂಪ್-'ಸಿ' ಹುದ್ದೆಗಳಿಗೆ ಶೇಕಡ 5 ರಷ್ಟು ಅಂಗವಿಕಲರಿಗೆ ಮೀಸಲಾತಿ ಕಲ್ಪಿಸಿದ್ದು, ಇದರನ್ವಯ ಶೇಕಡ 40 ಕ್ಕಿಂತ ಕಡಿಮೆ ಇಲ್ಲದಂತಹ ಅಂಗವಿಲತೆಯುಳ್ಳ ಅಭ್ಯರ್ಥಿಗಳು ಮಾತ್ರ ಈ ಮೀಸಲಾತಿಯನ್ನು ಕೋರಲು ಅರ್ಹರು. ಸರ್ಕಾರದ ಅಧಿಕೃತ ಜ್ಞಾಪನ ಸಂಖ್ಯೆ: ಸಿಆಸುಇ 115 ಸೆನೆನಿ 2005 ದಿನಾಂಕ: 19-11-2005 ರಲ್ಲಿ ನಿಗದಿಪಡಿಸಿರುವ ನಮೂನೆಯಲ್ಲಿ ಅಂಗವಿಕಲತೆ ಬಗ್ಗೆ ಸರ್ಕಾರದ ಆದೇಶ ಸಂಖ್ಯೆ: ಮಮಿ ೬೫ ಪಿ ಹೆಚ್ ಪಿ 2010 ದಿನಾಂಕ: 18-02-2011 ರಂತೆ ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿಯ ವೈದ್ಯಕೀಯ ಪ್ರಾಧಿಕಾರ/ತಾಲ್ಲೂಕು ಮಟ್ಟದ ವೈದ್ಯಕೀಯ ಪ್ರಾಧಿಕಾರ/ಜಿಲ್ಲಾ ಮಟ್ಟದ ವೈದ್ಯಕೀಯ ಪ್ರಾಧಿಕಾರ/ಬೆಂಗಳೂರು ವೈದ್ಯಕೀಯ ಪ್ರಾಧಿಕಾರ ಇವರಿಂದ ಪ್ರಮಾಣ ಪತವನ್ನು ನಿಗದಿಪಡಿಸಿದ ಕೊನೆಯ ದಿನಾಂಕದೊಳಗೆ ಪಡೆದಿಟ್ಟುಕೊಂಡು ಅರ್ಜಿ ಸಲ್ಲಿಸುವಾಗ ಅಪ್ಲೋಡ್ ಮಾಡತಕ್ಕದ್ದು ತಪ್ಪಿದಲ್ಲಿ ಅಂತಹ ಅಭ್ಯರ್ಥಿಗಳ ಮೀಸಲಾತಿಯನ್ನು ರದ್ದು ಪಡಿಸಲಾಗುವುದು (ಈ ಪ್ರಮಾಣ ಪತ್ರದ ನಮೂನೆಯನ್ನು ಅಧಿಸೂಚನೆಯ ಕೊನೆಯಲ್ಲಿ ತೋರಿಸಲಾಗಿದೆ). ಇತರೆ ಯಾವುದೇ ನಮೂನೆಯಲ್ಲಿ ಅಂಗವಿಕಲತೆಯ ಬಗ್ಗೆ ಪಡೆಯಲಾಗಿರುವ ಪ್ರಮಾಣ ಪತ್ರಗಳನ್ನು/ಗುರುತಿನ ಚೀಟಿಯ ಪ್ರತಿಗಳನ್ನು ಪರಿಗಣಿಸಲು ಬರುವುದಿಲ್ಲ.
	ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 272 ಸೇನೆನಿ 2013 ದಿನಾಂಕ: 11-02-2021 ರನ್ವಯ ಎದ್ದು ಕಾಣುವ ಅಂಗವಿಕಲತೆ (Benchmark Disabilities) ಅಥವಾ ನಿರ್ದಿಷ್ಟಪಡಿಸಿದ ಅಂಗವಿಕಲತೆ (Specified Disabilities) ಅಭ್ಯರ್ಥಿಗಳು ಅರ್ಜಿ ಸಲ್ಲಿಸುವ ಸಮಯದಲ್ಲಿ ಅಂಗವಿಕಲತೆಯ ಸಂಬAಧಿಸಿದ ಮೀಸಲಾತಿಯನ್ನು ಕೋರಿ ಅಂಗವಿಕಲತೆಯ ಪ್ರಮಾಣ ಪತ್ರವನ್ನು ಅಪ್ ಲೋಡ್ ಮಾಡತಕ್ಕದ್ದು ಹಾಗೂ ಇತರೆ ಎದ್ದು ಕಾಣುವ ಅಂಗವಿಕಲತೆಯ ಹೊಂದಿರುವ ಅಭ್ಯರ್ಥಿಗಳು ಪರೀಕ್ಷೆಯನ್ನು ಬರೆಯಲು ಲಿಪಿಕಾರರ ಸಹಾಯ ಬೇಕಿದ್ದಲ್ಲಿ ದೈಹಿಕ ಅಸಮರ್ಥತೆ ಹೊಂದಿರುವ ಬಗ್ಗೆ ವೈದ್ಯಕೀಯ ಮಂಡಳಿಯಿಂದ ಅನುಬಂಧ-1 ರಲ್ಲಿ ಪಡೆದ ಪ್ರಮಾಣ ಪತ್ರವನ್ನು ಸಲ್ಲಿಸತಕ್ಕದ್ದು. ತನ್ನದೇ ಆದ ಲಿಪಿಕಾರರ ಸೇವೆಯನ್ನು ಪಡೆಯಲು ಇಚ್ಛಿಸುವ ಅಭ್ಯರ್ಥಿಗಳು ಅನುಬಂಧ-1 ಮತ್ತು ಅನುಬಂಧ-2 ರಲ್ಲಿ ಪಡೆದ ಪ್ರಮಾಣ ಪತ್ರಗಳನ್ನು ಅರ್ಜಿಯೊಂದಿಗೆ ಲಗತ್ತಿಸತಕ್ಕದ್ದು. ಈ ಸಂಬಂಧ ಅರ್ಜಿ ಸಲ್ಲಿಸುವ ಸಮಯದಲ್ಲಿ ಲಿಪಿಕಾರರ ಅವಶ್ಯಕತೆ ಇರುವ ಬಗ್ಗೆ ಅರ್ಜಿಯಲ್ಲಿನ ನಿಗದಿತ ಅಂಕಣದಲ್ಲಿ ಕಡ್ಡಾಯವಾಗಿ ನಮೂದಿಸತಕ್ಕದ್ದು. ಸ್ಪರ್ಧಾತ್ಮಕ ಪರೀಕ್ಷೆಯ ಪ್ರತಿ ಒಂದು ಗಂಟೆಗೆ ಪರೀಕ್ಷೆಗೆ ಹೆಚ್ಚುವರಿಯಾಗಿ 20 ನಿಮಿಷಗಳ ಕಾಲಾವಕಾಶವನ್ನು ನೀಡಲಾಗುವುದು. (ಅನುಬಂಧ-1 ಮತ್ತು 2ರ ನಮೂನೆಯನ್ನು ಅಧಿಸೂಚನೆಯ ಕೊನೆಯಲ್ಲಿ ತೋರಿಸಲಾಗಿದೆ).

ವಿಶೇಷ ಸೂಚನೆಗಳು:-

ಅಭ್ಯರ್ಥಿಗಳು ಅರ್ಜಿ ಸಲ್ಲಿಸುವಾಗ ಹುದ್ದೆಗೆ ನಿಗದಿಪಡಿಸಿದ ವಿದ್ಯಾರ್ಹತೆಯ ಪ್ರಮಾಣ ಪತ್ರ, ವಯೋಮಿತಿಗೆ ಸಂಬಂಧಿಸಿದಂತೆ ಪ್ರಮಾಣ ಪತ್ರ, ಹಾಗೂ ಮೇಲ್ಕಂಡ ಮೀಸಲಾತಿಗಳನ್ನು ಕೋರುವ ಎಲ್ಲಾ

For more job news visit : www.kpscvaani.com

(1) ಅಭ್ಯರ್ಥಿಯು ತನ್ನ ಇಷ್ಟೇಚ್ಛೆಯ ಒಂದಕ್ಕಿಂತ ಹೆಚ್ಚಿನ ಅರ್ಜಿಗಳನ್ನು ಸಲ್ಲಿಸತಕ್ಕದ್ದಲ್ಲ.

(2) ಭರ್ತಿ ಮಾಡಿದ ಅರ್ಜಿಯನ್ನು ಅಗತ್ಯ ದಾಖಲೆಗಳೊಂದಿಗೆ ಪತ್ರಾಂಕಿತ ಅಧಿಕಾರಿಯ ದೃಢೀಕರಣದೊಂದಿಗೆ ದ್ವಿಪ್ರತಿಯಲ್ಲಿ ಸಲ್ಲಿಸುವುದು.

(3) ಅರ್ಜಿಯಲ್ಲಿ ನೀಡುವ ವಿಳಾಸ ಮತ್ತು ಮೊಬೈಲ್ ಸಂಖ್ಯೆಯೇ ಅಂತಿಮವಾಗಿದ್ದು, ಎಲ್ಲಾ ಪತ್ರ ವ್ಯವಹಾರಗಳನ್ನು ಅದೇ ವಿಳಾಸಕ್ಕೆ ಕಳುಹಿಸಿ ಕೊಡಲಾಗುವುದು. ನಂತರದಲ್ಲಿ ವಿಳಾಸ ಬದಲಾವಣೆ ಬಗ್ಗೆ ಯಾವುದೇ ಪತ್ರ ವ್ಯವಹಾರವನ್ನು ಪರಿಗಣಿಸಲಾಗುವುದಿಲ್ಲ.

(4) ಅಭ್ಯರ್ಥಿಗಳ ಅರ್ಹತೆಯ ವಿಷಯದಲ್ಲಿ ಆಯ್ಕೆ ಪ್ರಾಧಿಕಾರದ ನಿರ್ಧಾರವೇ ಅಂತಿಮವಾಗಿರುತ್ತದೆ.

(5) ರಾಜ್ಯ ಸರ್ಕಾರ ಅಥವಾ ಕೇಂದ್ರ ಸರ್ಕಾರದ ನೌಕರಿ ಸೇವೆಯಲ್ಲಿ ಇರುವ ಅಭ್ಯರ್ಥಿಗಳು ತಮ್ಮ ಇಲಾಖೆಯ ಮುಖ್ಯಸ್ಥರ ನಿರಾಕ್ಷೇಪಣಾ ಪತ್ರವನ್ನು ಹೊಂದಿರತಕ್ಕದ್ದು.

(6) ನೇಮಕಾತಿ ಪ್ರಕ್ರಿಯೆಯನ್ನು ಯಾವುದೇ ಸಂದರ್ಭದಲ್ಲಿ ಮುಂದೂಡುವ ರದ್ದುಗೊಳಿಸುವ ಮತ್ತು ನಿರ್ಬಂಧನೆಗಳನ್ನು ಬದಲಾಯಿಸುವ ಅಧಿಕಾರವನ್ನು ನೇಮಕಾತಿ ಪ್ರಾಧಿಕಾರ ಹೊಂದಿರುತ್ತದೆ.

(7) ಅರ್ಜಿಯನ್ನು ಸ್ವೀಕರಿಸಲು ನಿಗದಿಪಡಿಸಿರುವ ದಿನಾಂಕವು ಸಾರ್ವಜನಿಕ ರಜಾ ದಿನವಾಗಿ ಘೋಷಿಸಲ್ಪಟ್ಟರೆ ಆ ದಿನಾಂಕದ ಮಾರನೇ ದಿನವನ್ನು ಅರ್ಜಿ ಸ್ವೀಕರಿಸಲು ಕೊನೆ ದಿನಾಂಕವಾಗಿರುತ್ತದೆ.

(8) ಅಭ್ಯರ್ಥಿಗಳು ತಮಗೆ ಅನ್ವಯಿಸುವ ಮೀಸಲಾತಿಗಳನ್ನು ಅರ್ಜಿ ಸಲ್ಲಿಸುವ ಸಮಯದಲ್ಲೇ ಕೋರತಕ್ಕದ್ದು (Claim) ಹಾಗೂ ಈ ಸಂಬಂಧ ಸದರಿ ಪ್ರಮಾಣ ಪತ್ರಗಳನ್ನು ತಪ್ಪದೇ ಲಗತ್ತಿಸಬೇಕು. ಈ ಎರಡೂ ಪ್ರಕ್ರಿಯೆಗಳು ಕಡ್ಡಾಯವಾಗಿದ್ದು, ತಪ್ಪಿದ್ದಲ್ಲಿ ಅಂತಹ ಮೀಸಲಾತಿಯನ್ನು ತಿರಸ್ಕರಿಸಲಾಗುವುದು. ಈ ಸಂಬಂಧ ತದನಂತರ ಸಲ್ಲಿಸುವ ಯಾವುದೇ ಮನವಿಗಳನ್ನು ಪರಿಗಣಿಸಲಾಗುವುದಿಲ್ಲ.

9) ಅಭ್ಯರ್ಥಿಗಳು ಕೋರುವ ವಿವಿಧ ಮೀಸಲಾತಿಗಳಿಗೆ ಸಂಬಂಧಿಸಿದಂತೆ ತಮ್ಮ ಹೆಸರಿನಲ್ಲಿಯೇ ಎಲ್ಲಾ ಪ್ರಮಾಣ ಪತ್ರಗಳನ್ನು ಪಡೆದಿಟ್ಟುಕೊಂಡಿದ್ದು, ಪ್ರಾಧಿಕಾರವು ಕೋರಿದಾಗ ಹಾಗೂ ಮೂಲ ದಾಖಲೆಗಳ ಪರಿಶೀಲನಾ ಸಮಯದಲ್ಲಿ ಹಾಜರುಪಡಿಸತಕ್ಕದ್ದು, ತಪ್ಪಿದ್ದಲ್ಲಿ ಅಂತಹ ಮೀಸಲಾತಿಗಳನ್ನು ತಿರಸ್ಕರಿಸಲಾಗುವುದು.

10) ಮೀಸಲಾತಿ ಪ್ರಮಾಣ ಪತ್ರಗಳ ನಮೂನೆಗಳನ್ನು ಅಧಿಸೂಚನೆಯ ಕೊನೆಯಲ್ಲಿ ತೋರಿಸಲಾಗಿದೆ.

11) ಇತರೆ ನಮೂನೆಗಳಲ್ಲಿ ಸಲ್ಲಿಸಲ್ಪಡುವ ಮೀಸಲಾತಿ ಪ್ರಮಾಣ ಪತ್ರಗಳನ್ನು ತಿರಸ್ಕರಿಸಲಾಗುವುದು.

12) ಅಭ್ಯರ್ಥಿಗಳು ತಮ್ಮ ಮಾಹಿತಿಗಾಗಿ ಭರ್ತಿ ಮಾಡಿ ಸಲ್ಲಿಸಿದ ಅರ್ಜಿಯ ಒಂದು ಫೋಟೋ ಪ್ರತಿಯನ್ನು ಜೆರಾಕ್ಸ್ ಮಾಡಿ ಕಡ್ಡಾಯವಾಗಿ ತಮ್ಮೊಂದಿಗೆ ಇಟ್ಟುಕೊಳ್ಳಲು ಸೂಚಿಸಿದೆ. ಯಾವುದೇ ಕಾರಣಕ್ಕೂ ಅರ್ಜಿಯ ಪ್ರತಿಯನ್ನು ಒದಗಿಸಲಾಗುವುದಿಲ್ಲ.

13) ಹುದ್ದೆಗಳಿಗೆ ನಿಗದಿಪಡಿಸಿರುವ ವಯೋಮಿತಿ, ವಿದ್ಯಾರ್ಹತೆ, ಮೀಸಲಾತಿ, ಇತ್ಯಾದಿಗಳಿಗನುಗುಣವಾಗಿ ಅರ್ಜಿಯಲ್ಲಿ ಸರಿಯಾದ ಮಾಹಿತಿ ನೀಡುವುದು ಅಭ್ಯರ್ಥಿಗಳ ಜವಾಬ್ದಾರಿಯಾಗಿರುತ್ತದೆ.

14) ಮೂಲ ದಾಖಲೆಗಳ ಪರಿಶೀಲನೆಗೆ ಅರ್ಹರಾಗುವ ಅಭ್ಯರ್ಥಿಗಳಿಗೆ ಅಂಚೆ ಹಾಗೂ ಕಛೇರಿ ದೂರವಾಣಿ ಮೂಲಕ ಮಾಹಿತಿ ನೀಡಲಾಗುವುದು. ಕಡ್ಡಾಯವಾಗಿ ಅರ್ಜಿಯಲ್ಲಿ ನಮೂದಿಸಿದ ಎಲ್ಲಾ ಮೂಲ ದಾಖಲೆಗಳನ್ನು ಸಲ್ಲಿಸತಕ್ಕದ್ದು.

15) ನಿಗದಿಪಡಿಸಿದ ದಿನಾಂಕದಂದು ದಾಖಲಾತಿಗಳ ಪರಿಶೀಲನೆಗೆ ಹಾಜರಾಗದೇ ಇರುವ ಅಭ್ಯರ್ಥಿಗಳು ಅನರ್ಹಗೊಳ್ಳುತ್ತಾರೆ ಹಾಗೂ ಅವರ ಹೆಸರನ್ನು ನೇಮಕಾತಿ ಪ್ರಕ್ರಿಯೆಯಿಂದ ಕೈಬಿಡಲಾಗುವುದು.

16) ಅರ್ಜಿಯಲ್ಲಿ ಕೇಳಿರುವ ಪೂರ್ಣ ಮಾಹಿತಿಯನ್ನು ಭರ್ತಿ ಮಾಡಿಲ್ಲದೇ ಇರುವ ಅಭ್ಯರ್ಥಿಗಳ ಅರ್ಜಿಗಳನ್ನು ಯಾವುದೇ ಮುನ್ಸೂಚನೆ ನೀಡದೇ ತಿರಸ್ಕರಿಸಲಾಗುವುದು.

17) ಅಭ್ಯರ್ಥಿಗಳಿಗೆ ಕನ್ನಡ ಭಾಷಾ ಓದಲು, ಬರೆಯಲು ಮತ್ತು ಅರ್ಥ ಮಾಡಿಕೊಳ್ಳುವ ಜ್ಞಾನದ ಅವಶ್ಯಕತೆ ಕಡ್ಡಾಯವಾಗಿರುತ್ತದೆ.

18) ಹೆಚ್ಚಿನ ವಿವರಗಳಿಗಾಗಿ ಬೆಂಗಳೂರು ನಗರ ಜಿಲ್ಲಾ ಪಂಚಾಯತ್ ವೆಬ್‌ಸೈಟ್ (https://zpbengaluruurban.karnataka.gov.in/en) ರಲ್ಲಿನ ಮಾಹಿತಿ ಸೂಚೆಯಲ್ಲಿ ಲಭ್ಯವಿರುತ್ತದೆ ಮತ್ತು ಸ್ಪಷ್ಟೀಕರಣ ಅವಶ್ಯವಿದ್ದಲ್ಲಿ ಸಹಾಯವಾಣಿ ಸಂಖ್ಯೆ: 080-26716169 ಗೆ ಕಛೇರಿ ಕೆಲಸದ ವೇಳೆಯಲ್ಲಿ ಸಂಪರ್ಕಿಸಬಹುದಾಗಿದ್ದು, ಹಾಗೂ ಸಂಬಂಧಿಸಿದ ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳಿಂದ ಮಾಹಿತಿ

For more job news visit : www.kpscvaani.com

19) ಅರ್ಜಿದಾರರು ಮೀಸಲಾತಿಗೆ ಸಂಬಂಧಪಟ್ಟ ಎಲ್ಲಾ ದಾಖಲಾತಿಗಳನ್ನು ಅರ್ಜಿಯನ್ನು ಸಲ್ಲಿಸಲು ಕೊನೆಯ ದಿನಾಂಕದೊಳಗಾಗಿ ಪಡೆದಿರತಕ್ಕದು.

ದುರ್ನಡತೆ:-

ಒಬ್ಬ ಅಭ್ಯರ್ಥಿಯು ನಕಲಿ ವ್ಯಕ್ತಿಯಾಗಿರುವನೆಂದು ಅಥವಾ ಖೋಟಾ ದಸ್ತಾವೇಜು ಅಥವಾ ತಿದ್ದಲಾದ ದಸ್ತಾವೇಜುಗಳನ್ನು ಸಲ್ಲಿಸಿರುವನೆಂದು ಅಥವಾ ತಪ್ಪು ಅಥವಾ ಸುಳ್ಳು ಹೇಳಿಕೆ ನೀಡಿರುವನೆಂದು ಅಥವಾ ವಾಸ್ತವಿಕ ಮಾಹಿತಿಯನ್ನು ಮರೆಮಾಚಿರುವನೆಂದು ಅಥವಾ ನೇಮಕಾತಿ ಉದ್ದೇಶಗಳಿಗಾಗಿ ದಾಖಲಾತಿ ಪರಿಶೀಲನೆಯಲ್ಲಿ ನಡೆಸಲಾದ ಅನುಚಿತ ಮಾರ್ಗವನ್ನು ಅನುಸರಿಸುತ್ತಿರುವನೆಂದು ಅಥವಾ ಅನುಸರಿಸಲು ಪ್ರಯತ್ನಿಸಿರುವನೆಂದು ಅಥವಾ ಅವರ ನೇಮಕಾತಿಯ ಸಂಬಂಧದಲ್ಲಿ ಯಾವುದೇ ಇತರೆ ಅಕ್ರಮ ಮತ್ತು ಅನುಚಿತ ಮಾರ್ಗವನ್ನು ಅವಲಂಬಿಸಿರುವನೆಂದು, ಕಂಡುಬಂದಲ್ಲಿ ಅವನು/ಅವಳು ಸ್ವತಃ ಕ್ರಿಮಿನಲ್ ವ್ಯವಹರಣೆಗಳಿಗೆ ಮತ್ತು ಶಿಸ್ತು ಕ್ರಮಕ್ಕೆ ಒಳಪಡುವುದಲ್ಲದೆ ಹುದ್ದೆಯ ಆಯ್ಕೆಯಿಂದ ಅಭ್ಯರ್ಥಿತ್ವವನ್ನು ರದ್ದುಪಡಿಸಲಾಗುವುದು.

23/7/24

ಮುಖ್ಯಕಾರ್ಯನಿರ್ವಾಹಕ ಅಧಿಕಾರಿ
ಬೆಂಗಳೂರು ನಗರ ಜಿಲ್ಲಾ ಪಂಚಾಯಿತಿ
ಬೆಂಗಳೂರು.

For more job news visit : www.kpscvaani.com

ಕರ್ನಾಟಕ ಸರ್ಕಾರ

ಬೆಂಗಳೂರು ನಗರ ಜಿಲ್ಲಾ ಪಂಚಾಯಿತಿ

ಸಂಖ್ಯೆ:ಆಡಳಿತ(5) ಗ್ರಾಪಂಗಂ/ಮೇ.ನೇ/144/2023-24 ಎಸ್.ಕರಿಯಪ್ಪ ರಸ್ತೆ, ಬನಶಂಕರಿ
ಬೆಂಗಳೂರು, ದಿನಾಂಕ:23.07.2024

ಅಧಿಸೂಚನೆ

ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ (ಗ್ರಾಮ ಪಂಚಾಯತಿ ಗ್ರಂಥಾಲಯ ಮತ್ತು ಮಾಹಿತಿ ಕೇಂದ್ರಗಳ ಮೇಲ್ವಿಚಾರಕರ ಸೇವಾ) ನಿಯಮಗಳು, 2022ರಂತೆ ಜಾರಿಯಲ್ಲಿರುವ ನಿಯಮಗಳಡಿಯಲ್ಲಿ ಗ್ರಾಮ ಪಂಚಾಯತಿ ಗ್ರಂಥಾಲಯ ಮತ್ತು ಮಾಹಿತಿ ಕೇಂದ್ರಗಳ ಮೇಲ್ವಿಚಾರಕರ ಖಾಲಿ ಹುದ್ದೆಗಳಿಗೆ ನೇಮಕಾತಿ ಪ್ರಕ್ರಿಯೆಯನ್ನು ಕೈಗೊಳ್ಳಲಾಗಿದೆ.

ಬೆಂಗಳೂರು ನಗರ ಜಿಲ್ಲಾ ಪಂಚಾಯಿತಿ ವ್ಯಾಪ್ತಿಯಲ್ಲಿ 02 ಗ್ರಾಮ ಪಂಚಾಯಿತಿಯ ಗ್ರಂಥಾಲಯ ಮತ್ತು ಮಾಹಿತಿ ಕೇಂದ್ರಗಳ ಮೇಲ್ವಿಚಾರಕರ ಹುದ್ದೆ ಖಾಲಿ ಇದ್ದು, ಸದರಿ ಗ್ರಾಮ ಪಂಚಾಯಿತಿಯ ಗ್ರಂಥಾಲಯಗಳಿಗೆ ಪ್ರಸ್ತುತ ಖಾಲಿ ಇರುವ ಪ್ರತಿ ಗ್ರಾಮ ಪಂಚಾಯಿತಿಗೆ ಒಂದರಂತೆ ಒಟ್ಟು 02 ಗ್ರಾಮ ಪಂಚಾಯಿತಿ ಗ್ರಂಥಾಲಯ ಮತ್ತು ಮಾಹಿತಿ ಕೇಂದ್ರಗಳ ಮೇಲ್ವಿಚಾರಕರ ಖಾಲಿ ಹುದ್ದೆಗಳನ್ನು ಅರ್ಹ ಅಭ್ಯರ್ಥಿಗಳಿಂದ ಅರ್ಜಿಯನ್ನು ಆಹ್ವಾನಿಸಲಾಗಿದೆ. ಆಸಕ್ತ ಅಭ್ಯರ್ಥಿಗಳು ಹೆಚ್ಚಿನ ಮಾಹಿತಿಗಾಗಿ ಬೆಂಗಳೂರು ನಗರ ಜಿಲ್ಲಾ ಪಂಚಾಯಿತಿ ವೆಬ್ URLhttps://zpbengaluruurban.karnataka.gov.in/enರಲ್ಲಿ ಪಡೆಯಬಹುದಾಗಿರುತ್ತದೆ. ಅಭ್ಯರ್ಥಿಗಳು ಸಂಬಂಧಿಸಿದ ಗ್ರಾಮ ಪಂಚಾಯಿತಿ ಕಾರ್ಯಾಲಯಗಳಿಂದ ಅರ್ಜಿಯನ್ನು ಪಡೆದು ಯಾವುದೇ ಶುಲ್ಕವಿಲ್ಲದೇ ಭರ್ತಿ ಮಾಡಿ ಸಂಬಂಧಿಸಿದ ಅದೇ ಗ್ರಾಮ ಪಂಚಾಯಿತಿ ಕಾರ್ಯಾಲಯಗಳಿಗೆ ಅರ್ಜಿಗಳನ್ನು ಖುದ್ದು ಸಲ್ಲಿಸುವುದು.

ಸ್ವೀಕೃತಿ ಕಾಲಮಿತಿ:

ಅರ್ಜಿ ಸಲ್ಲಿಸಲು ನಿಗದಿಪಡಿಸಿರುವ ಪ್ರಾರಂಭಿಕ ದಿನಾಂಕ	25.07.2024
ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ	13.08.2024

ವಿಶೇಷ ಸೂಚನೆ:

- ಅಭ್ಯರ್ಥಿಗಳು ಅರ್ಜಿಯನ್ನು ಭರ್ತಿ ಮಾಡಲು ಮೊದಲು ಎಲ್ಲಾ ವಿವರಗಳನ್ನು ಓದಿ.
- ಅರ್ಥೈಸಿಕೊಂಡು ಆ ನಂತರವೇ ತಮಗೆ ಅನ್ವಯವಾಗುವ ವಿವರಗಳನ್ನು ಭರ್ತಿ ಮಾಡತಕ್ಕದ್ದು.
- ಒಮ್ಮೆ ಅರ್ಜಿ ಸಲ್ಲಿಸಿದ ನಂತರ ಅರ್ಜಿಯಲ್ಲಿ ವಿವರಗಳನ್ನು ತಿದ್ದುಪಡಿ/ಸೇರ್ಪಡೆ ಮಾಡುವಂತೆ ನೀಡುವ ಯಾವುದೇ ಮನವಿಗಳನ್ನು ತಿರಸ್ಕರಿಸಲಾಗುವುದು.
- ಅರ್ಜಿ ಸಲ್ಲಿಸುವ ಸಮಯದಲ್ಲಿ ಮೀಸಲಾತಿಯನ್ನು ಕೋರದೆ ತದನಂತರದಲ್ಲಿ ಮೀಸಲಾತಿಯನ್ನು ಪರಿಗಣಿಸುವಂತೆ ಕೋರಿ ಸಲ್ಲಿಸುವ ಮನವಿ/ದಾಖಲೆಗಳನ್ನು ಪರಿಗಣಿಸಲಾಗುವುದಿಲ್ಲ.

ಅರ್ಜಿ ಸಲ್ಲಿಸುವ ಹಂತಗಳು/ಅರ್ಜಿ ಸಲ್ಲಿಸುವ ಪ್ರಕ್ರಿಯೆ:-

ಅಭ್ಯರ್ಥಿಯು ಅರ್ಜಿ ಭರ್ತಿಮಾಡಿ ಸಲ್ಲಿಸಿದ ಮಾತ್ರಕ್ಕೆ ಅಭ್ಯರ್ಥಿಗಳು ಅಧಿಸೂಚನೆಯಲ್ಲಿನ ಎಲ್ಲಾ ಷರತ್ತುಗಳನ್ನು ಪೂರೈಸಿರುತ್ತಾರೆ ಎಂದಲ್ಲ ತದನಂತರದಲ್ಲಿ ಅರ್ಜಿಗಳನ್ನು ಪರಿಶೀಲನೆಗೆ ಒಳಪಡಿಸಲಾಗುವುದು ಹಾಗೂ ಯಾವುದೇ ಹಂತದಲ್ಲಿ ನ್ಯೂನತೆಗಳು ಕಂಡುಬಂದಲ್ಲಿ ಅಂತಹ ಅಭ್ಯರ್ಥಿಗಳ ಅರ್ಜಿಗಳನ್ನು ತಿರಸ್ಕರಿಸಲಾಗುವುದು.

ಅರ್ಜಿ ಸಲ್ಲಿಸುವ ಪ್ರಕ್ರಿಯೆಯು ಅಭ್ಯರ್ಥಿಗಳು ಸೂಚನೆಯಲ್ಲಿ ತಿಳಿಸಿರುವ ಅಂಶಗಳನ್ನು ಹಾಗೂ ಎಲ್ಲಾ ಸೂಚನೆಗಳನ್ನು ಓದಿದ ನಂತರವೇ ಅರ್ಜಿಯನ್ನು ಭರ್ತಿಮಾಡತಕ್ಕದ್ದು.

For more job news visit : www.kpscvaani.com

ಅಭ್ಯರ್ಥಿಗಳು ಅರ್ಜಿ ಭರ್ತಿ ಮಾಡುವ ಮೊದಲು ಅಧಿಸೂಚನೆಯಲ್ಲಿ [illegible] ಷರತ್ತುಗಳನ್ನು ಪಾಲಿಕೊಳ್ಳತಕ್ಕದ್ದು. ನೇಮಕಾತಿ ಪ್ರಾಧಿಕಾರವು ದೃಢೀಕರಿಸಿ ನೀಡಿರುವ ಹುದ್ದೆಗಳ ಮೀಸಲಾತಿಗೆ ಸಂಬಂಧಿಸಿದ ಅಂಕಣದಲ್ಲಿ ಉಪಯೋಗಿಸಿದ ಪದಗಳ ಅರ್ಥವನ್ನು ಈ ಕೆಳಕಂಡಂತೆ ಅರ್ಥೈಸಿಕೊಳ್ಳಬೇಕು:-

ಸಾ.ಅ	ಸಾಮಾನ್ಯ ಅಭ್ಯರ್ಥಿ	GM	General Merit
ಪ.ಜಾತಿ	ಪರಿಶಿಷ್ಟ ಜಾತಿ	SC	Scheduled Caste
ಪ.ಪಂ	ಪರಿಶಿಷ್ಟ ಪಂಗಡ	ST	Scheduled Tribe
ಪ್ರ-1	ಪ್ರವರ್ಗ-1	Cat-1	Category - 1
2ಎ	ಪ್ರವರ್ಗ-2ಎ	2A	Category - 2A
2ಬಿ	ಪ್ರವರ್ಗ-2ಬಿ	2B	Category - 2B
3ಎ	ಪ್ರವರ್ಗ-3ಎ	3A	Category - 3A
3ಬಿ	ಪ್ರವರ್ಗ-3ಬಿ	3B	Category - 3B
ಗ್ರಾಮೀಣ	ಗ್ರಾಮೀಣ ಅಭ್ಯರ್ಥಿ	Rural	Rural Candidate
ಕ.ಮಾ.ಅ	ಕನ್ನಡ ಮಾಧ್ಯಮ ಅಭ್ಯರ್ಥಿ	KMS	Kannada Medium Student
ಅಂ.ವಿ	ಅಂಗವಿಕಲ ಅಭ್ಯರ್ಥಿ	PH	Physically Handicapped
ಮ.ಅ	ಮಹಿಳಾ ಅಭ್ಯರ್ಥಿ	WC	Women Candidate

ಅರ್ಹತಾ ಷರತ್ತುಗಳು:

(ಅ)	ಭಾರತೀಯ ನಾಗರೀಕನಾಗಿರತಕ್ಕದ್ದು.
(ಆ)	ಒಬ್ಬ ಜೀವಂತ ಪತ್ನಿಗಿಂತ ಹೆಚ್ಚು ಮಂದಿ ಪತ್ನಿಯರನ್ನು ಹೊಂದಿರುವ ಪುರುಷ ಅಭ್ಯರ್ಥಿ ಮತ್ತು ಈಗಾಗಲೇ ಇನ್ನೊಬ್ಬ ಹೆಂಡತಿ ಇರುವ ವ್ಯಕ್ತಿಯನ್ನು ಮದುವೆಯಾಗಿರುವ ಮಹಿಳಾ ಅಭ್ಯರ್ಥಿಯು ಸರ್ಕಾರದಿಂದ ಪೂರ್ವಾನುಮತಿಯನ್ನು ಪಡೆಯದೇ ನೇಮಕಾತಿಗೆ ಅರ್ಹರಾಗುವುದಿಲ್ಲ.
ಇ)	ಅಭ್ಯರ್ಥಿಯು ಮಾನಸಿಕವಾಗಿ ಮತ್ತು ದೈಹಿಕವಾಗಿ ಆರೋಗ್ಯವಂತರಾಗಿರಬೇಕು ಮತ್ತು ಅವರ ನೇಮಕಾತಿಯು ಕರ್ತವ್ಯಗಳ ದಕ್ಷ ನಿರ್ವಹಣೆಗೆ ಆತಂಕವನ್ನುಂಟು ಮಾಡುವ ಸಂಭವ ಇರುವ ಯಾವುದೇ ದೈಹಿಕ ನ್ಯೂನತೆಯಿಂದ ಮುಕ್ತರಾಗಿರಬೇಕು.
ಈ)	ದೈಹಿಕವಾಗಿ ಅನರ್ಹರಾಗಿದ್ದಾರೆಂಬುದಾಗಿ ವೈದ್ಯಕೀಯ ಮಂಡಳಿಯ ವರದಿಯ ಮೇಲೆ ಅನರ್ಹರೆಂಬುದಾಗಿ ತಿರಸ್ಕರಿಸುವ ಪೂರ್ಣ ವಿವೇಚನೆಯನ್ನು ರಾಜ್ಯ ಸರ್ಕಾರವು ಕಾದಿರಿಸಿಕೊಂಡಿದೆ ಮತ್ತು ಸರ್ಕಾರದ ವಿವೇಚನೆಯು ಯಾವುದೇ ವಿಧದಲ್ಲೂ ಈ ನಿಯಮಗಳ ಮೂಲಕ ಸೀಮಿತವಾಗಿರುವುದಿಲ್ಲ.

ನಿಗಧಿತ ಶೈಕ್ಷಣಿಕ ಅರ್ಹತೆಯ ಜೊತೆಗೆ ಈ ಮೇಲ್ಕಂಡ ಅರ್ಹತೆಗಳನ್ನು ಹೊಂದಿರುವ ಅಭ್ಯರ್ಥಿಗಳು ನೇಮಕಾತಿಗಾಗಿ ಅರ್ಜಿ ಸಲ್ಲಿಸಲು ಅರ್ಹತೆಯನ್ನು ಹೊಂದಿರುತ್ತಾರೆ.

ಆಯ್ಕೆ ವಿಧಾನ:-

- ಶೈಕ್ಷಣಿಕ ಅರ್ಹತೆಯಲ್ಲಿನ ಮೆರಿಟ್ ಮತ್ತು ರೋಷ್ಟರ್ ಮೀಸಲಾತಿ ಆಧಾರದ ಮೇಲೆ ಅಭ್ಯರ್ಥಿಗಳನ್ನು ಆಯ್ಕೆ ಮಾಡಲಾಗುವುದು. ಒಂದು ವೇಳೆ ಇಬ್ಬರು ಅಥವಾ ಹೆಚ್ಚಿನ ಅಭ್ಯರ್ಥಿಗಳು ಸಮಾನವಾದ ಅಂಕಗಳನ್ನು/ಮೆರಿಟನ್ನು ಹೊಂದಿದಲ್ಲಿ ವಯಸ್ಸಿನಲ್ಲಿ ಹಿರಿಯರಾದವರನ್ನು ಆಯ್ಕೆಗೆ ಪರಿಗಣಿಸಲಾಗುವುದು, ಅದರಂತೆ ತಾತ್ಕಾಲಿಕ ಆಯ್ಕೆ ಪಟ್ಟಿಯನ್ನು ಪ್ರಕಟಿಸಲಾಗುವುದು.
- ಗ್ರಂಥಾಲಯ ಮೇಲ್ವಿಚಾರಕರ ಹುದ್ದೆಗೆ ಸಂಬಂಧಿಸಿದಂತೆ ಸರ್ಟಿಫಿಕೇಷನ್ ಕೋರ್ಸ್ ಇನ್ ಲೈಬ್ರರಿ ಸೈನ್ಸ್ ಪದವಿ ಪಡೆದಿರುವ ಅಭ್ಯರ್ಥಿಗಳು ಅರ್ಜಿ ಸಲ್ಲಿಸದಿದ್ದಲ್ಲಿ ಪಿ.ಯು.ಸಿ ಪರೀಕ್ಷೆಯಲ್ಲಿ ಅಭ್ಯರ್ಥಿಯು ಗಳಿಸಿದ ಅಂಕಗಳನ್ನು ಆಧರಿಸಿ ಮೀಸಲಾತಿ ಬಿಂದುವಿನಂತೆ ಆಯ್ಕೆಗೆ ಪರಿಗಣಿಸಲಾಗುವುದು. ಒಂದು ವೇಳೆ ಇಬ್ಬರು

For more job news visit : www.kpscvaani.com

ಅಥವಾ ಹೆಚ್ಚಿನ ಅಭ್ಯರ್ಥಿಗಳು ಸಮಾನವಾದ ಅಂಕಗಳನ್ನು/ಮೆರಿಟನ್ನು ಹೊಂದಿದಲ್ಲಿ ವಯಸ್ಸಿನಲ್ಲಿ ಹಿರಿಯರಾದವರನ್ನು ಆಯ್ಕೆಗೆ ಪರಿಗಣಿಸಲಾಗುವುದು.

• ತಾತ್ಕಾಲಿಕ ಆಯ್ಕೆ ಪಟ್ಟಿಯನ್ನು ಆಯಾ ಗ್ರಾಮ ಪಂಚಾಯಿತಿಯ ಸೂಚನಾ ಫಲಕದಲ್ಲಿ ಪ್ರಕಟಿಸಲಾಗುವುದು. ತಾತ್ಕಾಲಿಕ ಆಯ್ಕೆ ಪಟ್ಟಿಗೆ ಸಂಬಂಧಿಸಿದಂತೆ ಆಕ್ಷೇಪಣೆ/ಸಲಹೆಗಾಗಿ ಹದಿನೈದು ದಿನಗಳ ಕಾಲಾವಕಾಶವನ್ನು ನೀಡಲಾಗುವುದು ಹಾಗೂ ಆಕ್ಷೇಪಣೆ/ಸಲಹೆಗಳನ್ನು ಪರಿಶೀಲಿಸಿ ಅಂತಿಮ ಆಯ್ಕೆ ಪಟ್ಟಿಯನ್ನು ಪ್ರಕಟಿಸಲಾಗುವುದು.

ಶೈಕ್ಷಣಿಕ ವಿದ್ಯಾರ್ಹತೆ ಮತ್ತು ವಯೋಮಿತಿ:-

1) **ಶೈಕ್ಷಣಿಕ ವಿದ್ಯಾರ್ಹತೆ:-**

• ದ್ವಿತೀಯ ಪದವಿ ಪೂರ್ವ ಪರೀಕ್ಷೆ (ಪಿ.ಯು.ಸಿ)ಯಲ್ಲಿ ಉತ್ತೀರ್ಣರಾಗಿರಬೇಕು ಮತ್ತು ಸರ್ಟಿಫೀಕೇಷನ್ ಕೋರ್ಸ್ ಇನ್ ಲೈಬ್ರರಿ ಸೈನ್ಸ್ ನಲ್ಲಿ ಪ್ರಮಾಣ ಪತ್ರ ಪಡೆದಿರತಕ್ಕದ್ದು ಹಾಗೂ ಕನಿಷ್ಠ ಮೂರು ತಿಂಗಳ ಕಂಪ್ಯೂಟರ್ ಕೋರ್ಸ್ನಲ್ಲಿ ಉತ್ತೀರ್ಣರಾಗಿರಬೇಕು.

• ಒಂದು ವೇಳೆ ಸರ್ಟಿಫೀಕೇಷನ್ ಕೋರ್ಸ್ ಇನ್ ಲೈಬ್ರರಿ ಸೈನ್ಸ್ ಪದವಿ ಪಡೆದಿರುವ ಅಭ್ಯರ್ಥಿಗಳು ಅರ್ಜಿ ಸಲ್ಲಿಸದಿದ್ದಲ್ಲಿ ಪಿ.ಯು.ಸಿ. ಪರೀಕ್ಷೆಯಲ್ಲಿ ಅಭ್ಯರ್ಥಿಯು ಗಳಿಸಿದ ಅಂಕಗಳನ್ನು ಆಧರಿಸಿ ಅಧಿಸೂಚಿಸಿದ ಖಾಲಿ ಹುದ್ದೆಗಳಿಗೆ ಮೀಸಲಾತಿ ಬಿಂದುವಿನಂತೆ ಆಯ್ಕೆಗೆ ಪರಿಗಣಿಸಲಾಗುವುದು.

• ಈ ವಿದ್ಯಾರ್ಹತೆಯನ್ನು ಅಧಿಸೂಚನೆ ಹೊರಡಿಸುವ ದಿನಾಂಕಕ್ಕೆ ಮುಂಚಿತವಾಗಿ ಹೊಂದಿರಬೇಕು. ವಿದ್ಯಾರ್ಹತೆಯ ದಾಖಲಾತಿಗಳ ನೈಜತೆ ಬಗ್ಗೆ ಸಂಬಂಧಪಟ್ಟ ಸಕ್ಷಮ ಪ್ರಾಧಿಕಾರದಿಂದ ದೃಡಿಪಡಿಸಿಕೊಂಡ ನಂತರ ನೇಮಕಾತಿ ಆದೇಶ ನೀಡಲಾಗುವುದು.

2) **ವಯೋಮಿತಿ:-** ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಅಧಿಸೂಚನೆಯಲ್ಲಿ ನಮೂದಿಸಿದಂತೆ ಅಭ್ಯರ್ಥಿಯು ಕನಿಷ್ಠ 18 ವರ್ಷ ವಯಸ್ಸನ್ನು ಪೂರೈಸಿರತಕ್ಕದ್ದು ಹಾಗೂ ಗರಿಷ್ಠ ವಯೋಮಿತಿಯು ಈ ಕೆಳಕಂಡಂತೆ ಇರತಕ್ಕದ್ದು.

ಎ	ಸಾಮಾನ್ಯ ವರ್ಗ	35ವರ್ಷ
ಬಿ	2ಎ, 2ಬಿ, 3ಎ, 3ಬಿ	38ವರ್ಷ
ಸಿ	ಪ.ಜಾತಿ/ಪ.ಪಂಗಡ/ಪ್ರವರ್ಗ-1	40ವರ್ಷ

3) **ವಾಸ ಸ್ಥಳ:-**

ಗ್ರಾಮ ಪಂಚಾಯಿತಿ ಗ್ರಂಥಾಲಯ ಮತ್ತು ಮಾಹಿತಿ ಕೇಂದ್ರಗಳ ಮೇಲ್ವಿಚಾರಕರ ಹುದ್ದೆಗೆ ಅರ್ಜಿ ಸಲ್ಲಿಸುವ ಅಭ್ಯರ್ಥಿಗಳು ಸಂಬಂಧಪಟ್ಟ ಗ್ರಾಮ ಪಂಚಾಯಿತಿ ವ್ಯಾಪ್ತಿಯ ನಿವಾಸಿಯಾಗಿರತಕ್ಕದ್ದು ಪರಂತು ಸಂಬಂಧಪಟ್ಟ ಗ್ರಾಮ ಪಂಚಾಯಿತಿ ವ್ಯಾಪ್ತಿಯ ನಿವಾಸಿ ಲಭ್ಯತೆ ಇಲ್ಲದೆ ಇದ್ದಲ್ಲಿ ಆಯಾ ತಾಲ್ಲೂಕು ವ್ಯಾಪ್ತಿಯಲ್ಲಿನ ಬೇರೆ ಗ್ರಾಮ ಪಂಚಾಯಿತಿಯ ಅಭ್ಯರ್ಥಿಗಳನ್ನು ಆಯ್ಕೆಗೆ ಪರಿಗಣಿಸಲಾಗುವುದು. ಸಂಬಂಧಿಸಿದಂತೆ ಸಕ್ಷಮ ಪ್ರಾಧಿಕಾರವಾದ ತಹಶೀಲ್ದಾರ ಇವರಿಂದ ವಾಸಸ್ಥಳ ಪ್ರಮಾಣ ಪತ್ರವನ್ನು ಪಡೆದು ಸಲ್ಲಿಸತಕ್ಕದ್ದು.

1ನೇ ವೃತ್ತದ 06ನೇ ಬಿಂದುವಿನಿಂದ 15ನೇ ಬಿಂದುವಿನವರೆಗೆ

ಮೀಸಲಾತಿ	ಇತರೆ	ಮಹಿಳೆ	ಗ್ರಾಮೀಣ	ಮಾ.ಸೈ	ಕ.ಮಾ.ಅ	ಯೋ.ನಿ.ಅ	ತೃ.ಲಿಂಗಿ	ಒಟ್ಟು
ಪ.ಜಾ	–	–	01	–	–	–	–	01
ಪ.ಪಂ	–	–	–	–	–	–	–	–
ಪ್ರವರ್ಗ-1	–	–	–	–	–	–	–	–
ಪ್ರ 2(ಎ)	–	–	–	–	–	–	–	–
ಪ್ರ 2(ಬಿ)	–	–	–	–	–	–	–	–
ಪ್ರ 3(ಎ)	–	–	–	–	–	–	–	–
ಪ್ರ 3(ಬಿ)	–	–	–	–	–	–	–	–
ಸಾ.ಅ	–	01	–	–	–	-	–	01
ಒಟ್ಟು	–	01	01	–	–	–	–	02

For more job news visit : www.kpscvaani.com

ಬೆಂಗಳೂರು ನಗರ ಜಿಲ್ಲಾ ಪಂಚಾಯಿತಿ ವ್ಯಾಪ್ತಿಯ ಗ್ರಾಮ ಪಂಚಾಯಿತಿ ಗ್ರಂಥಾಲಯ ಮತ್ತು ಮಾಹಿತಿ ಕೇಂದ್ರಗಳ ಮೇಲ್ವಿಚಾರಕರ 2 ಖಾಲಿ ಹುದ್ದೆಗಳಿಗೆ ಲಂಬ ಮತ್ತು ಸಮತಲ ಮೀಸಲಾತಿಯನ್ನು ಗ್ರಾಮ ಪಂಚಾಯಿತಿ ಗ್ರಂಥಾಲಯ ಮತ್ತು ಮಾಹಿತಿ ಕೇಂದ್ರಗಳಲ್ಲಿ ತೆರವಾದ ಹುದ್ದೆಗಳನ್ನು ಹಿರಿಯ ಶ್ರೇಣಿಯ ಮೂಲಕ ಮೀಸಲಾತಿ ನಿಗದಿಪಡಿಸಿದ ವಿವರ ಈ ಕೆಳಕಂಡಂತೆ ಇದೆ.

ಬಿಂದು ಸಂಖ್ಯೆ	ತಾಲ್ಲೂಕು	ಗ್ರಾಮ ಪಂಚಾಯಿತಿ ಹೆಸರು	ಗ್ರಾಮ ಪಂಚಾಯಿತಿ ಗ್ರಂಥಾಲಯ ಮತ್ತು ಮಾಹಿತಿ ಕೇಂದ್ರದ ಹೆಸರು	ಮೀಸಲಾತಿ ಬಿಂದು	ನಿಗದಿಪಡಿಸಲಾದ ಮೀಸಲಾತಿ		ಹುದ್ದೆಗಳ ಸಂಖ್ಯೆ
1.	ಬೆಂ.ದಕ್ಷಿಣ	ತಾವರೆಕೆರೆ	ತಾವರೆಕೆರೆ	15	ಪ.ಜಾತಿ	ಗ್ರಾ.ಅ	01
2.	ಬೆಂ.ದಕ್ಷಿಣ	ಸೂಲಿಕೆರೆ	ಕೊಮ್ಮಘಟ್ಟ	16	ಸಾ.ಅ	ಮ.ಅ	01

ಸರ್ಕಾರದ ಆದೇಶ ಸಂಖ್ಯೆ:RDPR 425 ಜಿಪಅ 2023 ದಿ: 14-08-2023 ರಂತೆ ಗ್ರಾಮ ಪಂಚಾಯಿತಿ ಗ್ರಂಥಾಲಯ ಮೇಲ್ವಿಚಾರಕರಿಗೆ ಪ್ರತಿ ಮಾಹೆ ಮಾಸಿಕ ಕನಿಷ್ಠ ವೇತನ ರೂ.15,196.72/- ಹಾಗೂ ಕನಿಷ್ಠ ವೇತನದ ಜೊತೆಗೆ ಕಾರ್ಮಿಕ ಇಲಾಖೆಯು ಕಾಲಕಾಲಕ್ಕೆ ನಿಗದಿಪಡಿಸುವ ವ್ಯತ್ಯಯವಾಗುವ ತುಟ್ಟಿ ಭತ್ಯೆಯನ್ನು (VDA) ಪಾವತಿಸಲಾಗುವುದು.

ಅರ್ಜಿಗಳ ಸೂಕ್ಷ್ಮ ಪರಿಶೀಲನೆ:-

ಈ ಹುದ್ದೆಗಳಿಗೆ ಅರ್ಜಿ ಸಲ್ಲಿಸುವ ಲಗತ್ತುಗಳ ಆಧಾರದ ಮೇಲೆ ಮಾತ್ರವೇ ದಾಖಲೆಗಳ ಪರಿಶೀಲನೆ ಮಾಡಲಾಗುವುದು. ಅವಶ್ಯಕ ಸಂದರ್ಭಗಳಲ್ಲಿ ಮೂಲ ದಾಖಲೆಗಳ ಪರಿಶೀಲನೆಯನ್ನು ನಡೆಸಲು ತೀರ್ಮಾನಿಸಿದಲ್ಲಿ ಅರ್ಜಿಯೊಂದಿಗೆ ಸಲ್ಲಿಸಿದ ಪ್ರಮಾಣ ಪತ್ರಗಳ ಮೂಲ ಪ್ರತಿಗಳನ್ನು ತಪ್ಪದೇ ಹಾಜರುಪಡಿಸತಕ್ಕದ್ದು. ಏನೇ ಸಂದರ್ಭವಿದ್ದರೂ ವಯೋಮಿತಿ, ವಿದ್ಯಾರ್ಹತೆ ಮತ್ತು ಮೀಸಲಾತಿಗಳಿಗೆ ಅರ್ಜಿಯನ್ನು ಸಲ್ಲಿಸುವ ಸಂದರ್ಭದಲ್ಲಿ ಲಗತ್ತಿಸಿದ ಪ್ರಮಾಣ ಪತ್ರಗಳನ್ನೇ ಅಂತಿಮವೆಂದು ತೀರ್ಮಾನಿಸಲಾಗುತ್ತದೆ. ಆದ್ದರಿಂದ ಅಭ್ಯರ್ಥಿಗಳು ಜಾಗರೂಕತೆಯಿಂದ ತಮಗೆ ಅನ್ವಯಿಸುವ ಎಲ್ಲಾ ದಾಖಲೆಗಳನ್ನು ಸ್ಪಷ್ಟವಾಗಿ ಗೋಚರಿಸುವ ರೀತಿಯಲ್ಲಿ ಭರ್ತಿ ಮಾಡತಕ್ಕದ್ದು.

ಆದ್ದರಿಂದ ಈ ಕೆಳಕಂಡ ಪ್ರಮಾಣ ಪತ್ರಗಳನ್ನು ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಚಾಲ್ತಿಯಲ್ಲಿರುವಂತೆ ಕಡ್ಡಾಯವಾಗಿ ಪಡೆದಿಟ್ಟುಕೊಂಡು ಅರ್ಜಿಯೊಂದಿಗೆ ಭರ್ತಿ ಮಾಡಬೇಕು ತಪ್ಪಿದ್ದಲ್ಲಿ ಅವರ ಮೀಸಲಾತಿ/ಅಭ್ಯರ್ಥಿತ್ವವನ್ನು ಪರಿಗಣಿಸಲಾಗುವುದಿಲ್ಲ.

1) ಹುದ್ದೆಗೆ ನಿಗದಿಪಡಿಸಲಾದ ವಿದ್ಯಾರ್ಹತೆಯನ್ನು ಅರ್ಜಿ ಸಲ್ಲಿಸಲು ನಿಗಧಿಪಡಿಸಿದ ಕೊನೆಯ ದಿನಾಂಕದೊಳಗೆ ಪಡೆದಿರುವ ಬಗ್ಗೆ ಪ್ರಮಾಣ ಪತ್ರಗಳು/ಎಲ್ಲಾ ವರ್ಷಗಳ ಅಂಕಪಟ್ಟಿಗಳು ಕಡ್ಡಾಯವಾಗಿರುತ್ತದೆ.
